ಸಂಪುಟ : 9 ಸಂಚಿಕೆ 269 ಪುಟ : 4 ಬೆಲೆ: 3.00 ಶುಕ್ರವಾರ ಡಿಸೆಂಬರ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 269 Pages : 4 Price : 3.00 Friday December 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಲೋಕಾಯುಕ್ತ ಜನ ಸಂಪರ್ಕ ಸಭೆ ಡಿ12ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಛೇರಿಯ ಪೊಲೀಸ್ ಅಧಿಕಾರಿಗಳು ಡಿಸೆಂಬರ್ 12ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನರಗುಂದದ ತಹಸೀಲ್ದಾರ ಕಛೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದು. ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ.

ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳ ಬಗ್ಗೆ ಹಾಗೂ ಸಾರ್ವಜನಿಕರ ಕೆಲಸ-ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರವನ್ನು ದಾಖಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಆರಕ್ಷಕ ಉಪ ಅಧೀಕ್ಷಕರಾದ ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 68ನೇ ಮಹಾಪರಿನಿರ್ವಾಣ ದಿನದ ಅಂಗವಾಗಿ ಗದಗ ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ವತಿಯಿಂದ ನಗರಸಭೆಯ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಡಿ. 6ರಂದು ಬೆಳಿಗ್ಗೆ 10ಕ್ಕೆ ಮಾಲಾರ್ಪಣೆ ಕಾರ್ಯಕ್ರಮ ಜರುಗಲಿದೆ.

ಕೆಪಿಸಿಸಿ ಉಪಾಧ್ಯಕ್ಷರು, ಗದಗ ವಿಧಾನಸಭಾ ಮತಕ್ಷೇತ್ರದ ಮಾಜಿ ಶಾಸಕ ಡಿ.ಆರ್. ಪಾಟೀಲ ಮಾಲಾರ್ಪಣೆ ಮಾಡುವರು. ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್ಸಿ-ಎಸ್ಟಿ, ಅಲ್ಪಸಂಖ್ಯಾತರ ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಅಸಂಘಟಿತ ಘಟಕ ಹಾಗೂ ಕಾರ್ಮಿಕರ ಘಟಕ ಪಂಚಾಯತ ಸಂಘಟನೆ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕು ಎಂದು ಗದಗ ಜಿಲ್ಲಾ ಪರಿಶಿಷ್ಟ ಜಾತಿ ಕಾಂಗ್ರೆಸ್ ವಿಭಾಗದ ಅಧ್ಯಕ್ಷ ಬಸವರಾಜ ಕಡೆಮನಿ ವಿನಂತಿಸಿದ್ದಾರೆ.

ರಾಷ್ಟ್ರ ಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆ ಕಾರ್ಯಮಕ್ರಮದಲ್ಲಿ ನ್ಯಾಯಾಧೀಶ ಶ್ರೀನಿವಾಸ

ನಿರಂತರ ಅಧ್ಯಯನ, ಪರಿಶ್ರಮದಿಂದ ಯಶಸ್ಸು

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಯುವ ವಕೀಲರು ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ಗಳಲ್ಲಿ ಕಾರ್ಯನಿರ್ವಹಿಸಲು ಮುಂದಾಗುತ್ತಿದ್ದಾರೆ. ಆದರೆ, ಮೇಲುಹಂತದ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ಯಾವ ಆಧಾರ ಮತ್ತು ಯಾವ ಕಾನೂನು ಅಡಿಯಲ್ಲಿ ಮಂಡನೆ ಮಾಡಬೇಕು ಎಂಬುದು ಕಷ್ಟದ ಕಾರ್ಯವಾಗುತ್ತದೆ. ಆದ್ದರಿಂದ ಯುವ ವಕೀಲರು ಸಿವಿಲ್ ಮತ್ತು ಕ್ರಿಮಿನಲ್ ಪ್ರಕಣಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಬೇಕಾದರೆ ಪ್ರಕರಣದ ಮೂಲವನ್ನು ಮತ್ತು ಸತ್ಯಾಸತ್ಯತೆಯನ್ನು ಅರ್ಥೈಸಿಕೊಳ್ಳುವುದು ಅಗತ್ಯವಾಗಿದೆ ಎಂದು ಕರ್ನಾಟಕ ಹೈಕೋರ್ಟ್ ನ್ಯಾಯಾಧೀಶ ಶ್ರೀನಿವಾಸ ಹರ್ಷಕುಮಾರ ಹೇಳಿದರು.

ಶಹರದ ಕೆ.ಎಲ್.ಇ ಸಂಸ್ಥೆಯ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯ ಹಾಗೂ ಕೆ.ಎಲ್.ಇ. ಲಾ ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಮೂರು ದಿನಗಳ ರಾಷ್ಟ್ರ ಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆ ಕಾರ್ಯಮಕ್ರಮವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕಾನೂನು ವಿದ್ಯಾರ್ಥಿಗಳು ಕಾನೂನು ಪದವಿ ಪಡೆದುಕೊಂಡ ನಂತರ ಮೂರು-ನಾಲ್ಕು ತಿಂಗಳಗಳ ಕಾಲ ನ್ಯಾಯಾಲಯದ ಪ್ರಕ್ರಿಯೆಯನ್ನು ತಿಳಿದುಕೊಂಡು ಜೀವನ ಮತ್ತು ಪ್ರಕರಣವನ್ನು ಯಾವ ಹಂತದಲ್ಲಿ ಮುಂದುವರೆಸಿಕೊಂಡು ಹೋಗಬೇಕು ಎಂಬುವುದನ್ನು

ತಿಳಿಯದೇ ವೃತ್ತಿಯನ್ನು ತ್ಯಜಿಸಿದ ಉದಾಹರಣೆಗಳು ಇವೆ. ಆದ್ದರಿಂದ ವಿದ್ಯಾರ್ಥಿಗಳು ವಿದ್ಯಾರ್ಥಿ ಹಂತದಲ್ಲಿಯೇ ಕಾಲೇಜುಗಳಲ್ಲಿ ನಡೆಯುವ ಅಣುಕು ನ್ಯಾಯಾಲಯ, ಅಣುಕು ರಾಜಿ ಸಂಧಾನ, ಚರ್ಚಾ ಸ್ಪರ್ಧೆಗಳಂತಹ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ತಮ್ಮನ್ನು ತಾವು ಸಮರ್ಥರನ್ನಾಗಿ ಮಾಡಿಕೊಂಡು ನ್ಯಾಯಾಲಯದ ಮುಂದೆ ಹಾಜರಾದಾಗ ಪಕ್ರರಣಗಳನ್ನು ಪ್ರಬುದ್ಧರಾಗಿ ಎದುರಿಸುಲು ಸಹಕಾರಿಯಾಗುತ್ತದೆ. ವಿವಿಧ ಕ್ಷೇತ್ರದಲ್ಲಿ ನಿರಂತರವಾಗಿ ಅಧ್ಯಯನ ಮತ್ತು ಕಠಿಣ ಪರಿಶ್ರಮ ವಹಿಸಿದಾಗ ಮಾತ್ರ ನಾವು ಸಮಾಜದಲ್ಲಿ ಹೆಸರು ಮತ್ತು ಹಣ ಗಳಿಕೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಕರ್ನಾಟಕ ಹೈಕೋಟ್ ನ್ಯಾಯಾಧೀಶ ಉಮೇಶ ಮಂಜುನಾಥಭಟ್ಟ ಅಡಿಗ ಮಾತನಾಡಿ, ವಕೀಲ ವೃತ್ತಿಯಲ್ಲಿ ದಾವೆಗೆ ಸೂಕ್ತವಾಗಿರುವುದು ವಾದ

> ಕರ್ನಾಟಕ ಹೈಕೋರ್ಟ್ ನ್ಯಾಯಾಧೀಶ ಟಿ.ಜೆ. ಶಿವಶಂಕ್ರಗೌಡ ಮಾತನಾಡಿ, ಸಂವಿಧಾನಕ್ಕೆ ಅಗೌರವ ತೋರಿಸುತ್ತಿರುವವರು ವಿದ್ಯಾವಂತರೇ ಆಗಿದ್ದಾರೆ. ಇದರಿಂದ ಸಂವಿಧಾನದ ಗೌರವಕ್ಕೆ ಧಕ್ಕೆಯಾಗುತ್ತಿದೆ. ವಿದ್ಯಾರ್ಥಿಗಳು ಇಲ್ಲಿ ನಡೆಯುವ ಅಣುಕು ನ್ಯಾಯಾಲಯಗಳಲ್ಲಿ ಸಂವಿಧಾನದ ಮೂಲ ಯಾವುದು ಎಂಬುವುದನ್ನು ಅರಿತುಕೊಂಡು ಸಮಾಜದಲ್ಲಿ ಸಂವಿಧಾನದ ಗೌರವನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದರು.

ಪತ್ರವಾಗಿದೆ. ಆದ್ದರಿಂದ ಯುವ ವಕೀಲರು ಮತ್ತು ಕಾನೂನು ವಿದ್ಯಾರ್ಥಿಗಳು ವಾದ ಮತ್ತು ಪ್ರತಿವಾದ ಪತ್ರಗಳನ್ನು ಚೆನ್ನಾಗಿ ಬರೆಯಬೇಕು. ಕಾನೂನು ಕೇವಲ ಒಂದು ಪುಸ್ತಕ ಅಲ್ಲ, ಅದು ಸಮುದ್ರವಿದಂತೆ. ಹಾಗಾಗಿ ವಿದ್ಯಾರ್ಥಿಗಳು ಕಾನೂನುಗಳನ್ನು ಅರ್ಥೈಸಿಕೊಳ್ಳುವುದು ತುಂಬಾ ಅಗತ್ಯವಾಗಿದೆ ಎಂದರು.

ಬೆಂಗಳೂರು ಕೆ.ಎಲ್.ಇ ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯ ಜೆ.ಎಂ. ಮಲ್ಲಿಕಾರ್ಜುನಯ್ಯ ಪ್ರಾಸ್ತಾವಿಕ ಮಾತನಾಡಿದರು. ಕೆ.ಎಲ್.ಇ ಸಂಸ್ಥೆಯ ನಿರ್ದೇಶಕ ಶ್ರೀಶೈಲಪ್ಪ ಮೆಟಗುಡ್ಡ, ಎಸ್.ಎ. ಮಾನ್ವಿ, ಸಿ. ಬಸವರಾಜ ಸೇರಿದಂತೆ ಇತರರಿದ್ದರು. ಎಸ್.ಎ ಮಾನ್ವಿ ಕಾಲೇಜಿನ ಪ್ರಾಚಾರ್ಯ ಜೈಹನುಮಾನ ಎಚ್.ಕೆ ಸ್ವಾಗತಿಸಿದರು. ಉಪನ್ಯಾಸಕ ಡಾ.ವಿಜಯ ಮುರದಂಡೆ ವಂದಿಸಿದರು.

ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆಗೆ ಸಿಎಂ ಸಿದ್ದರಾಮಯ್ಯ, ಸಚಿವರ ಆಗಮನ

ಕಾರ್ಯಕ್ರಮದ ಸಮಿತಿಗಳ ರಚನೆ ಇಂದು

■ ವಿಜಯಸಾಕ್ಷಿ ಸುದ್ದಿ, ರೋಣ

ಡಿ.15ರಂದು ರೋಣ ಪಟ್ಟಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅವರೊಂದಿಗೆ ಡಜನ್‌ಗೂ ಹೆಚ್ಚು ಸಚಿವರು ಆಗಮಿಸುವ ನಿರೀಕ್ಷೆಯಿದೆ. ಗಿರಡ್ಡಿ ಸರಕಾರಿ ಕಾಲೇಜಿನ ಆವರಣದ ಬದಲಾಗಿ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಸಮಾವೇಶ ನಡೆಸುವದಾಗಿ ಬಹುತೇಕ ಖಚಿತವಾಗಿದೆ.

ಶಾಸಕ ಜಿ.ಎಸ್. ಪಾಟೀಲ ಗುರುವಾರ ಬೆಳಗಿನ ಜಾವ ರೋಣ ಹಾಗೂ ಗಜೇಂದ್ರಗಡ ತಾಲೂಕಾ ಮಟ್ಟದ ಅಧಿಕಾರಿಗಳೊಂದಿಗೆ ಕ್ರೀಡಾಂಗಣಕ್ಕೆ ತೆರಳಿ ಸಮಾಲೋಚನೆ ನಡೆಸಿ, ಕ್ರೀಡಾಂಗಣದಲ್ಲಿಯೇ ಅಭಿವೃದ್ಧಿ ಕಾರ್ಯಗಳ ಶಂಕುಸ್ಥಾಪನೆ ಸಮಾರಂಭವನ್ನು ನೆರವೇರಿಸಲು ಸೂಚಿಸಿದರು.

ಈ ಮೊದಲು ಗುರುತಿಸಿದ್ದ ಜಾಗೆಯೂ ಬದಾಮಿ ರಸ್ತೆಗೆ ಹೊಂದಿಕೊಂಡಿದ್ದು, ಅಲ್ಲಿ ಸಮಾವೇಶ ನಡೆದರೆ ಸುಗಮ ಸಂಚಾರಕ್ಕೆ ತೊಂದರೆಯಾಗಬಹುದು ಎಂಬ ಕಾರಣಕ್ಕೆ ಮತ್ತೆ ಗುರುವಾರ ಸ್ಥಳ ಪರಿಶೀಲನೆ ಕಾರ್ಯ ನಡೆಯಿತು. ಅಲ್ಲದೆ ಡಿ.15 ರವಿವಾರವಿರುವುದರಿಂದ ಶಾಲಾ-ಕಾಲೇಜುಗಳಿಗೆ ರಜೆ ಇರುತ್ತದೆ. ಹೀಗಾಗಿ ಸಂಚಾರಕ್ಕೆ ತೊಂದರೆಯಾಗದ ರೀತಿಯಲ್ಲಿ ಶಾಲಾ-ಕಾಲೇಜುಗಳ ಆವರಣದಲ್ಲಿ ವಾಹನಗಳ ನಿಲುಗಡೆಗೆ

ಅವಕಾಶ ಮಾಡಿಕೊಟ್ಟರೆ ಸಮಸ್ಯೆ ಉದ್ಭವಿಸುವುದಿಲ್ಲ ಎಂಬ ಆಲೋಚನೆಯಿಂದ ಕಾರ್ಯಕ್ರಮವನ್ನು ತಾಲೂಕಾ ಕ್ರೀಡಾಂಗಣಕ್ಕೆ ಸ್ಥಳಾಂತರಿಸಲಾಗಿದೆ ಎನ್ನುವ ಅಭಿಪ್ರಾಯ ಕೆಲ ಮುಖಂಡರುಗಳಿಂದ ವ್ಯಕ್ತವಾಯಿತು.

ಇನ್ನು ಕಾರ್ಯಕ್ರಮದ ಯಶಸ್ವಿಗೆ ಸಮಿತಿಗಳ ರಚನೆ ಕಾರ್ಯ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆಯಲಿದ್ದು, ಕಾರ್ಯಕ್ರಮದ ಯಶಸ್ವಿಗೆ ಪ್ರತಿಯೊಬ್ಬರೂ ಕಂಕಣಬದ್ಧರಾಗಿ ಕೆಲಸ ನಿರ್ವಹಿಸಬೇಕು ಎಂಬ ಸೂಚನೆಯನ್ನು ಸಹ ನೀಡಲಿದ್ದಾರೆ. ಮುಖ್ಯವಾಗಿ ಅಧಿಕಾರಿಗಳು ಪ್ರಾಮಾಣಿಕತೆಯಿಂದ ಕೆಲಸ ನಿರ್ವಹಿಸಬೇಕು, ಶಂಕುಸ್ಥಾಪನೆಗೆ ಆಗಮಿಸುವ ನಾಗರಿಕ ಸಮುದಾಯಕ್ಕೆ ತೊಂದರೆಯಾಗದಂತೆ ನೀಗಾ ವಹಿಸಬೇಕು ಎಂಬ ಎಚ್ಚರಿಕೆಯನ್ನು ಸಹ ನೀಡಿದ್ದಾರೆ. ಒಟ್ಟಿನಲ್ಲಿ, ಬೃಹತ್ ಸಮಾವೇಶದ ಯಶಸ್ವಿಗೆ ಶಾಸಕ

> ಮತಕ್ಷೇತ್ರದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರಾದ ಎಚ್.ಸಿ. ಮಹದೇವಪ್ಪ, ಎಚ್.ಕೆ. ಪಾಟೀಲ, ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಕೃಷ್ಣ ಬೈರೆಗೌಡ, ಸಂತೋಷ ಲಾಡ್, ಶಿವರಾಜ್ ತಂಗಡಗಿ, ಶರಣಗೌಡ ಪಾಟೀಲ, ಆರ್.ಬಿ. ತಿಮ್ಮಾಪೂರ, ಮಲ್ಲಿಕಾರ್ಜುನ ಸೇರಿದಂತೆ ಅನೇಕ ಮುಖಂಡರು ಆಗಮಿಸುವ ನಿರೀಕ್ಷೆಯಿದ್ದು, ಒಟ್ಟಿನಲ್ಲಿ ಡಜನ್‌ಗೂ ಹೆಚ್ಚು ಸಚಿವರು ಆಗಮಿಸುವುದು ಖಚಿತ ಎಂಬ ಮಾತುಗಳು ಸಂಘಟಕರಿಂದ ತಿಳಿದುಬಂದಿದೆ.

ಜಿ.ಎಸ್. ಪಾಟೀಲ ನಿರಂತರವಾಗಿ ಸಭೆಗಳನ್ನು ನಡೆಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಸಂಗನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಸಂಗು ನವಲಗುಂದ, ಆನಂದ ಚಂಗಳಿ, ಡಾ. ಸಂಜಯ ರೆಡ್ಡೆರ, ಯಲ್ಲಪ್ಪ ಕಿರೇಸೂರ, ಅಸ್ಲಂ ಕೊಪ್ಪಳ, ಮಲಿಕ ಯಲಿಗಾರ, ತಹಸೀಲ್ದಾರ್ ನಾಗರಾಜ್ ಕೆ, ಎಇಇ ಬಲವಂತಪ್ಪ ನಾಯಕ, ಪಿಎಸ್‌ಐ ಪ್ರಕಾಶ ಬಣಕಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಮುಖಂಡರುಗಳು ಉಪಸ್ಥಿತರಿದ್ದರು.

ವಿಭಿನ್ನವಾಗಿ ಜನ್ಮದಿನ ಆಚರಿಸಿಕೊಂಡ ವಸಂತ ಪಡಗದ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ನಾಯಕ ವಸಂತ ಪಡಗದ ತಮ್ಮ ಜನ್ಮದಿನವನ್ನು ರಕ್ತದಾನ, ಪುಸ್ತಕ ವಿತರಣೆ, ಅನ್ನದಾನದ ಮಾಡುವ ಮೂಲಕ ವಿಭಿನ್ನವಾಗಿ ಆಚರಿಸಿಕೊಂಡರು. 37ನೇ ಜನ್ಮದಿನದ ಅಂಗವಾಗಿ ನಗರದ ಪುಟ್ಟರಾಜ ಕವಿ ಗವಾಯಿಗಳ ಮಠದಲ್ಲಿ ಆಶೀರ್ವಾದ ಪಡೆದು ಮಠದಲ್ಲಿ ಅಭಿಮಾನಿ ಬಳಗದ ಸದಸ್ಯರೊಂದಿಗೆ ಅನ್ನದಾನ ನೆರವೇರಿಸಿದರು.

ವಸಂತ ಪಡಗದ ಅಭಿಮಾನಿ ಬಳಗದಿಂದ ಯುವಕರು

ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು. ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಮುಖಂಡ ಕಾಂತಿಲಾಲ ಬನ್ಸಾಲಿ ಸೇರಿದಂತೆ ಪ್ರಮುಖರು ಹಾಜರಿದ್ದರು.

ಬೆಟಗೇರಿಯ ಮಂಜುನಾಥ ಬುದ್ಧಿಮಾಂದ್ಯ ವಿಶೇಷ ಶಾಲೆಗೆ ಭೇಟಿ ನೀಡಿ ಮಕ್ಕಳೊಂದಿಗೆ ಬೆರೆತು ಸಿಹಿ ಹಂಚಿದರು. ನಗರದ ಸರ್ಕಾರಿ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ಉಚಿತ ನೋಟ್ ಪುಸ್ತಕಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಸಂತ ಪಡಗದ, ಪ್ರತಿ ವರ್ಷ ನನ್ನ ಜನ್ಮದಿನವನ್ನು ಒಂದಿಲ್ಲೊಂದು ವಿಶೇಷತೆಯೊಂದಿಗೆ ಆಚರಿಸುತ್ತೇನೆ ಎಂದರಲ್ಲದೆ, ಇದಕ್ಕೆ ಸಹಕಾರ ನೀಡಿದ ಎಲ್ಲರಿಗೂ ಕೃತಜ್ಞತೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ವಸಂತ ಪಡಗದ ಅಭಿಮಾನಿ ಬಳಗದ ಸದಸ್ಯರು ಹಾಗೂ ಸ್ನೇಹಿತರು ಪಾಲ್ಗೊಂಡಿದ್ದರು.

ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯ

ವಿದ್ಯಾರ್ಥಿಗಳು ಕ್ರಿಯಾತ್ಮಕವಾಗಿ ಪ್ರತಿಭೆಯನ್ನು ಪ್ರದರ್ಶಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಲೆ, ಸಂಗೀತ, ಸಾಹಿತ್ಯ, ಕ್ರೀಡೆ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲಿ ಗದಗ ಜಿಲ್ಲೆಯ ಕೊಡಗೆ ಅಪಾರವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ಕಾಲೇಜನಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ

ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಯುವ ಸಂಘಗಳ ಒಕ್ಕೂಟ, ಲಾಯನ್ಸ್ ಶಿಕ್ಷಣ ಸಂಸ್ಥೆ, ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯ, ಇವರುಗಳ ಸಹಯೋಗದಲ್ಲಿ ಜರುಗಿದ 2024-25ನೇ ಸಾಲಿನ ಜಿಲ್ಲಾಮಟ್ಟದ ಯುವಜನೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಭಾರತರತ್ನ ಪ್ರಶಸ್ತಿ ಪಡೆದ ಪಂ. ಭೀಮಸೇನ ಜೋಶಿಯವರು ಸಂಗೀತಕ್ಕೆ ನೀಡಿದ ಕೊಡುಗೆ ಅನನ್ಯವಾದುದು. ಪಂಡಿತ ಪುಟ್ಟರಾಜ ಗವಾಯಿಗಳು ಸಂಗೀತಕ್ಕೆ ಸಲ್ಲಿಸಿದ ಸೇವೆ ಅಪಾರ. ಯುವಜನೋತ್ಸವದಲ್ಲಿ ಪಾಲ್ಗೊಳ್ಳುವ ಎಲ್ಲ ಸ್ಪರ್ಧಾಳುಗಳು ಭಾರತೀಯ ಕಲೆಗಳತ್ತ ಗಮನಹರಿಸಿ ಉತ್ತಮ ಯಶಸ್ಸು ಪಡೆದು ರಾ

ಅಕ್ಷರಾಭ್ಯಾಸವಷ್ಟೇ ಇದ್ದರೆ ಸಾಲದು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿರುವ ಪ್ರತಿಭೆಗಳ ಅನಾವರಣಕ್ಕೆ ಕಲಿಕೋಪಕರಣಗಳ ಮೇಳ ಸಹಕಾರಿಯಾಗಿದೆ ಎಂದು ಡಾ. ಎಸ್.ಸಿ. ಚವಡಿ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಕಲಿಕೋಪಕರಣಗಳ ಮೇಳಕ್ಕೆ ಚಾಲನೆ ನೀಡಿ ಮಾತನಾಡಿ, ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಅಕ್ಷರಾಭ್ಯಾಸ ಇದ್ದರೆ ಸಾಲದು. ಜ್ಞಾನದ ಅವಶ್ಯಕತೆ ಇಂದಿನ ದಿನಮಾನದಲ್ಲಿ ತುಂಬಾ ಅವಶ್ಯಕವಾಗಿದ್ದು, ನಿತ್ಯದ ಕಲಿಕೆಯೊಂದಿಗೆ ಹೆಚ್ಚು ಹೆಚ್ಚು ಆಸಕ್ತಿಯಿಂದ ಅಭ್ಯಾಸದಲ್ಲಿ ತೊಡಗಿಕೊಳ್ಳಲು ಸಹಕಾರಿಯಾಗುತ್ತದೆ ಹಾಗೂ ಇಂತಹ ಚಟುವಟಿಕೆಗಳಿಂದ ಅತೀ ಶೀಘ್ರವಾಗಿ ಮನನ ಮಾಡಿಕೊಳ್ಳುತ್ತಾರೆ ಎಂದರು.

ಪ.ಪಂ ಸದಸ್ಯ ವಿಜಯ ನೀಲಗುಂದ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ಕಲಿಕೋಪಕರಣ ಮೇಳ ಹಾಗೂ ವಿಜ್ಞಾನ ಮೇಳಗಳನ್ನು ಆಯೋಜಿಸುವುದರಿಂದ ಮಕ್ಕಳಲ್ಲಿ ಕಲಿಕೆಗೆ ಆಸಕ್ತಿ ಮೂಡುತ್ತದೆ. ಇದರಿಂದ ಶೈಕ್ಷಣಿಕವಾಗಿ ಮಕ್ಕಳು ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ, ಶಾಲಾ ಪ್ರಧಾನ ಗುರು ಸಂಗಮೇಶ ತಮ್ಮಣ್ಣವರ, ಎಸ್.ಪಿ. ಸರ್ವದೆ, ಆರ್.ಎಂ. ರೋಣದ, ಕೆ.ಎಸ್. ಗಾಣಿಗೇರ, ಪಿ.ಎಸ್. ಮರಿದೇವರಮಠ, ಶೋಭಾ ಪಾಟೀಲ್, ಬಸಮ್ಮಾ ಲದ್ದಿ, ಎಸ್‌ಡಿಎಂಸಿ ಸದಸ್ಯರಾದ ಮಾಹಾಂತೇಶ ಹುಲ್ಲೂರ, ನಿವೇದಿತಾ ಗೌಳಿ, ಶೈಲಾ ಬಾತಾಖಾನಿ ಇದ್ದರು.

ವಿಶ್ವ ಮೀನುಗಾರರ ದಿನಾಚರಣೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಕೆಪಿಸಿಸಿ ಕಛೇರಿಯ ಇಂದಿರಾಗಾಂಧಿ ಸಭಾಂಗಣದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಮೀನುಗಾರರ ವಿಭಾಗ ವತಿಯಿಂದ ಡಿ.7ರಂದು ಬೆಳಿಗ್ಗೆ 10ಕ್ಕೆ ವಿಶ್ವ ಮೀನುಗಾರರ ದಿನಾಚರಣೆ ಹಾಗೂ ಕಾರ್ಯಕರ್ತರ ಸಮ್ಮೇಳನ ಜರುಗುವುದು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ, ಎಐಸಿಸಿ ಮೀನುಗಾರ ವಿಭಾಗದ ರಾಷ್ಟ್ರೀಯ ಅಧ್ಯಕ್ಷರಾದ ಆರ್ಮಸ್ಟ್ರಾಂಗ್ ಫರ್ನಾಂಡೋ, ಮಾಜಿ ಸಂಸದರಾದ ಟಿ.ಎನ್. ಪ್ರತಾಪನ್, ಸಚಿವ, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯಕುಮಾರ ಸೊರಕೆ, ಕೆಪಿಸಿಸಿ ಮೀನುಗಾರರ ವಿಭಾಗದ ರಾಜ್ಯಾಧ್ಯಕ್ಷ ಮಂಜುನಾಥ ಸುಣಗಾರ, ಮೀನುಗಾರಿಕೆ ಸಚಿವರಾದ ಮಂಕಾಳ ವೈದ್ಯ, ಕಾಂಗ್ರೆಸ್ ಸಮಿತಿ ಗದಗ ಜಿಲ್ಲಾ ಮೀನುಗಾರ ವಿಭಾಗದ ಅಧ್ಯಕ್ಷ ಗುರಪ್ಪ ತಿರ್ಲಾಪೂರ ಸೇರಿದಂತೆ ರಾಜ್ಯ ವಿವಿಧ ಜಿಲ್ಲೆಗಳಿಂದ ಮೀನುಗಾರ ಸಮುದಾಯದ ಪಕ್ಷದ ಮುಖಂಡರುಗಳು ಭಾಗವಹಿಸುವರು. ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಮೀನುಗಾರರ ವಿಭಾಗದ ಅಧ್ಯಕ್ಷರು, ಬ್ಲಾಕ್ ಅಧ್ಯಕ್ಷರು ಇತರೆ ಪದಾಧಿಕಾರಿಗಳು ಭಾಗವಹಿಸಬೇಕೆಂದು ಕಾಂಗ್ರೆಸ್ ಸಮಿತಿ ಮೀನುಗಾರರ ವಿಭಾಗದ ಗದಗ-ಬೆಟಗೇರಿ ಶಹರ ಅಧ್ಯಕ್ಷ ಸಂಗಮೇಶ ಹಾದಿಮನಿ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

ಶ್ರೀ ಮಾರುತೇಶ್ವರ ಕಾರ್ತಿಕ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಮಾರುತೇಶ್ವರ ದೇವರ ಕಾರ್ತಿಕೋತ್ಸವ ಡಿ.7ರಂದು ನಡೆಯಲಿದೆ. ಬೆಳಿಗ್ಗೆ ಶ್ರೀ ದೇವರಿಗೆ ಪಂಚಾಮೃತ ಅಭಿಷೇಕ, ಕುಂಕುಮ ಪೂಜೆ, ವೀಳ್ಯದೆಲೆ ಪೂಜೆ ನೆರವೇರುವುದು.

ರಾತ್ರಿ 9 ಗಂಟೆಗೆ ಸಕಲ ಮಂಗಳಕರ ವಾದ್ಯದೊಂದಿಗೆ ಕಾರ್ತಿಕೋತ್ಸವ ಪ್ರಾರಂಭವಾಗುತ್ತದೆ ಎಂದು ಮಾರುತೇಶ್ವರ ಟ್ರಸ್ಟ್ ಕಮಿಟಿಯ ಪ್ರಕಟಣೆ ತಿಳಿಸಿದೆ.

ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, ಅರ್ಹ ಪಿಯುಸಿ ಸಮಾನಾಂತರ, ಸಾಮಾನ್ಯ, ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಿಗೆ ಶುಲ್ಕ, ಮರುಪಾವತಿ ಮತ್ತು ಪ್ರವರ್ಗ-1 ರ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನವನ್ನು ಡಿಸೆಂಬರ 20 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08372-237414 ಸಂಪರ್ಕಿಸಬಹುದಾಗಿದೆ.

ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರೇಗಲ್ ಪಟ್ಟಣ ಹಾಗೂ ಗ್ರಾಮದ ನಿವೇಶನ ರಹಿತ ಫಲಾನುಭವಿಗಳಿಗೆ ತಿಳಿಯಪಡಿಸುವುದೇನೆಂದರೆ ನರೇಗಲ್ ಪಟ್ಟಣ ಪಂಚಾಯತ್ ವ್ಯಾಪ್ತಿಯ ದ್ಯಾಂಪುರ ಮತ್ತು ತೋಟಗಂಟಿ ಗ್ರಾಮದಲ್ಲಿ ಲಭ್ಯವಿರುವ ಆಶ್ರಯ ನಿವೇಶನಗಳಿಗೆ ಅರ್ಹ ನಿವೇಶನ ರಹಿತ ಫಲಾನುಭವಿಗಳು ಕೆಳಕಂಡ ದಾಖಲಾತಿಗಳೊಂದಿಗೆ ಡಿಸೆಂಬರ್ 20 ರೊಳಗಾಗಿ ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಸಲ್ಲಿಸಬೇಕಾದ ದಾಖಲಾತಿ

ಅರ್ಜಿ ನಮೂನೆ, ಫಲಾನುಭವಿ ಆಧಾರ್ ಕಾರ್ಡ್ ಝೆರಾಕ್ಸ್ , ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಬ್ಯಾಂಕ್ ಪಾಸ್‌ಬುಕ್ ಝೆರಾಕ್ಸ್, ಕುಟುಂಬ ಸದಸ್ಯರ ಆಧಾರ್ ಕಾರ್ಡ್ ಝೆರಾಕ್ಸ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಾಸ್ ಪೋರ್ಟ್ ಸೈಜ ಭಾವಚಿತ್ರ .

ಹೆಚ್ಚಿನ ಮಾಹಿತಿಗಾಗಿ ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯ ದೂರವಾಣಿ ಸಂಖ್ಯೆ 08381-268228 ಸಂಪರ್ಕಿಸಬಹುದಾಗಿದೆ.

ಲಕ್ಕುಂಡಿಯಲ್ಲಿ ಮನರೆಗಾ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ

1.15 ಕೋಟಿ ರೂಗಳ ಆಕ್ಷೇಪಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2023-24ನೇ ಸಾಲಿನ ನಡೆದ ವಿವಿಧ 98 ಕಾಮಗಾರಿಗಳಲ್ಲಿ 44 ಕಾಮಗಾರಿಗಳ 1.15 ಕೋಟಿ ರೂಗಳನ್ನು ಆಕ್ಷೇಪಣೆಗೊಳಪಡಿಸಲಾಗಿದೆ.

ಈ ಕುರಿತು ಇಲ್ಲಿಯ ಅನ್ನದಾನೀಶ್ವರ ಸಮುದಾಯ ಭವನದಲ್ಲಿ ಕರೆಯಲಾಗಿದ್ದ ಮನರೆಗಾ ಸಾಮಾಜಿಕ ಪರಿಶೋಧನೆಯ ಗ್ರಾಮ ಸಭೆಯಲ್ಲಿ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಸಂತೋಷ ಪಾಟೀಲ ವಿವರಣೆ ನೀಡಿದರು.

ಲಕ್ಕುಂಡಿ ಗ್ರಾ.ಪಂ ವ್ಯಾಪ್ತಿಯಲ್ಲಿ ನಡೆದ ವೈಯಕ್ತಿಕ ಕಾಮಗಾರಿಗಳ ಹೊಳಗಟ್ಟಿ, ದನದದೊಡ್ಡಿ ನಿರ್ಮಾಣ, ಸಮುದಾಯ ಕಾಮಗಾರಿಗಳಾದ ರಸ್ತೆ ದುರಸ್ಥಿ, ಸಿ.ಸಿ ರಸ್ತೆ, ಶಾಲಾ ಮೈದಾನ ಕಾಮಗಾರಿಗಳನ್ನು 5 ದಿನ ಪರಿಶೀಲನೆ ಮಾಡಲಾಗಿದೆ. ಒಟ್ಟು 44 ಪ್ರಕರಣಗಳಲ್ಲಿ ಚೆಕ್ ಮೆಜರಮೆಂಟ್, ಬಿಲ್ ವೋಚರ್ ಇಲ್ಲದೇ ಇರುವುದು, ಅಳತೆ ನಮೂದಿಸದೇ ಇರುವುದು, 2 ಕಡತ ನಿಡದೇ ಇರುವುದರಿಂದ 1,15,12,078 ರೂ.ಗಳನ್ನು ಆಕ್ಷೆಪಣೆಗೊಳಪಡಿಸಲಾಗಿದೆ. ದರಪಟ್ಟಿ, ತುಲಾನಾತ್ಮಕ ಪಟ್ಟಿ, ಸರಬರಾಜು ಆದೇಶವಿಲ್ಲದೇ(ಕೆ.ಟಿ.ಪಿ.ಪಿ) 37,4,184 ರೂ.ಗಳ 5 ಕಾಮಗಾರಿಗಳನ್ನು ಮಾಡಲಾಗಿದೆ.

ಖನಿಜ ಭೂಮಾಪನ ಇಲಾಖೆಗೆ 27 ಕಾಮಗಾರಿಗಳಿಗೆ 41199 ರೂ ರಾಜಧನ ಪಾವತಿಸಿಲ್ಲ. ಮನೆ ನಿರ್ಮಾಣ 18 ದಿನ ಅಧಿಕ ಕೂಲಿ, ಮತ್ತು ಹೊಳಗಟ್ಟಿ ಪ್ಲಾಸ್ಟರ ಮಾಡದೇ ಇರುವುದರಿಂದ ಈ 2 ಪ್ರಕರಣಗಳಲ್ಲಿ 13749 ರೂ.ಗಳನ್ನು ವಸೂಲಾತಿಗೆ ಹಾಕಲಾಗಿದೆ ಎಂದು ತಿಳಿಸಿದರು. 62 ವೈಯಕ್ತಿಕ ಕಾಮಗಾರಿ, 36 ಸಮುದಾಯ ಕಾಮಗಾರಿ ಸೇರಿ ಒಟ್ಟು 98 ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ. ಒಟ್ಟು 37911 ಮಾನವ ದಿನಗಳು ಸೃಜನೆಯಾಗಿದೆ. ಒಟ್ಟು ಕೂಲಿ ಮೊತ್ತ 1,13,09,464 ಸಾಮಗ್ರಿ ಮೊತ್ತ 18,56,761 ರೂ. ಸೇರಿ 13166225 ರೂಗಳನ್ನು ಖರ್ಚು ಮಾಡಲಾಗಿದೆ ಎಂದು ಅವರು ವಿವರಿಸಿದರು.

15ನೇ ಹಣಕಾಸು ಯೋಜನೆಯ ಕುರಿತು ಗ್ರಾಮ ಸಂಪನ್ಮೂಲ ವ್ಯಕ್ತಿ ಎಂ.ಕೆ. ಹುಯಿಲಗೋಳ ವಿವರಣೆ ನೀಡುತ್ತಾ, ಆರಂಭದ ಮೊತ್ತ, ವರ್ಷದಲ್ಲಿ 2 ಸಲ ಜಮಾ ಆಗಿರುವ ಮೊತ್ತ, ಬ್ಯಾಂಕ್ ಬಡ್ಡಿ, ಮರಳಿ ಜಮಾ ಆದ ಜೆ.ಜೆ.ಎಂ ವಂತಿಗೆ ಸೇರಿ 17791315 ರೂ ಅನುದಾನದಲ್ಲಿ ಕುಡಿಯುವ ನೀರು, ನೈರ್ಮಲ್ಯ, ಬೀದಿ ದೀಪಗಳ ಕಾಮಗಾರಿ ಚಟುವಟಿಕೆಗೆ 6200941 ರೂ, ತೆರಿಗೆ 24784 ರೂ, ಸೇರಿದಂತೆ 6225745 ರೂ ಖರ್ಚು ಮಾಡಲಾಗಿದೆ ಎಂದು ವಿವರಿಸಿದರು.

ಇದರಲ್ಲಿ 18 ಕಾಮಗಾರಿಗಳಲ್ಲಿ 63476 ರೂ ಸರಕಾರಕ್ಕೆ ತೆರಿಗೆ ಭರಣ ಮಾಡಿಲ್ಲ. 37 ವೋಚರ್‌ಗಳಿಗೆ 1386772 ರೂ.ಗಳಿಗೆ ಕೆಟಿಪಿಪಿ ನಿಯಮ ಪಾಲನೆ ಮಾಡಿರುವುದಿಲ್ಲ. ಫಕ್ಕೀರಸ್ವಾಮಿ ದೇವಸ್ಥಾನದ ಮುಂದೆ ಸಮುದಾಯ ಭವನ ನಿರ್ಮಾಣಕ್ಕೆ 116290 ರೂ ಅನುದಾನದಲ್ಲಿ ಅಭಿವೃದ್ಧಿ ಮಾಡಲಾಗಿದ್ದು, ಸದರಿ ಯೋಜನೆಯಡಿ ಈ ದೇಗುಲಕ್ಕೆ ಅನುದಾನ ಉಪಯೋಗಿಸಲು ಅವಕಾಶವಿರುವುದಿಲ್ಲ. ಇದನ್ನು ಮೇಲಾಧಿಕಾರಿಗಳ ತಿರ್ಮಾನಕ್ಕೆ ಬಿಡಲಾಗಿದೆ ಎಂದು ವಿವರಿಸಿದರು.

ಶಿಕ್ಷಣ ಇಲಾಖೆಯ ಗದಗ ಶಹರ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಪಿ.ಡಿ. ಮಂಗಳೂರು ನೊಡೆಲ್ ಅಧಿಕಾರಿಯಾಗಿ ಆಗಮಿಸಿದ್ದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು, ಪಿ.ಡಿ.ಒ ರಾಜಕುಮಾರ ಭಜಂತ್ರಿ, 15ನೇ ಹಣಕಾಸು ಯೋಜನೆಯ ವ್ಯವಸ್ಥಾಪಕ ಎಂ. ಮರಿಬಸವ, ಸಂಪನ್ಮೂಲ ವ್ಯಕ್ತಿಗಳಾದ ವಸಂತ ಹಾದಿಮನಿ, ಮಲ್ಲಪ್ಪ ಜಿನಗಿ, ಮಂಜುನಾಥ ಹುಡೇದ, ಪವಿತ್ರಾ ಜಕ್ಕಲಿ ಇದ್ದರು. ಎಸ್.ಡಿ.ಎ ತುಕಾರಾಮ ಹುಲಗಣ್ಣವರ ನಿರೂಪಿಸಿ ವಂದಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಅಧಿಕಾರಿಗಳ ಹಾಗೂ ಮನರೆಗಾ ಯೋಜನೆಯ ಸಿಬ್ಬಂದಿಗಳು ಯೋಜನೆಯ ಕಾಮಗಾರಿಗಳನ್ನು ನಿಯಮಬಾಹಿರವಾಗಿ ಮಾಡದೇ ಪ್ರಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಧಿಕಾರಿ ವರ್ಗವು ಗ್ರಾ.ಪಂ ಅಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ಕಾನೂನು ತಿಳುವಳಿಕೆ ನೀಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಬೇಕು. ಕಳೆದ ವರ್ಷ ನಡೆದ ಮನೇರೆಗಾ ಕಾಮಗಾರಿಗಳ ಆಕ್ಷೇಪಣೆ, ವಸೂಲಾತಿ ಸೇರಿದಂತೆ ಅದರ ವಿವರವನ್ನು ಸಭೆಯ ಗಮನಕ್ಕೆ ತಂದು ಪಾರದರ್ಶಕ ಆಡಳಿತ ನೀಡಲು ಅನುಕೂಲ ಕಲ್ಪಿಸಬೇಕು ಎಂದರು.

ಡಿ.ಎಸ್.ಎಸ್. ಜಿಲ್ಲಾ ಸಂಘಟನಾ ಸಂಚಾಲಕರಾಗಿ ಸತೀಶ ಹೂಲಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರೊ. ಬಿ. ಕೃಷ್ಣಪ್ಪನವರು ಸ್ಥಾಪಿಸಿದ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ನೂತನ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ನಗರದ ರಾಯಲ್ ಫಂಕ್ಷನ್ ಹಾಲ್‌ನಲ್ಲಿ ನಡೆಯಿತು. ಕಾರ್ಯಕ್ರಮದ ಉದ್ಘಾಟನೆಯನ್ನು ರಾಜ್ಯ ಸಂಚಾಲಕ ಎಂ. ಗುರುಮೂರ್ತಿ ನೆರವೇರಿಸಿದರು.

ಮುಖ್ಯ ಅತಿಥಿಗಳಾಗಿ ಹನಮಂತಪ್ಪ ಕಾಕರಗಲ್, ಎಸ್.ಫಕೀರಪ್ಪ ಮುಂಡಗೋಡ, ಬಿ.ಎಸ್. ಗಂಗಾಧರಪ್ಪ ಚಿಕ್ಕಬಳ್ಳಾಪುರ, ರಮೇಶ ಮಾದರ ಬೆಳಗಾವಿ, ಎಸ್.ಎನ್. ಬಳ್ಳಾರಿ ಗದಗ, ಹೇಮಾವತಿ ಹಿರೇಮನಿ ಹುಬ್ಬಳ್ಳಿ, ಪ್ರಕಾಶ ಹೊಸಳ್ಳಿ ಮುಂತಾದವರು ಭಾಗವಹಿಸಿದ್ದರು.

ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಯಲ್ಲಿ ಹೊಸ ಪದಾಧಿಕಾರಿಗಳ ಪದಗ್ರಹಣ ಮಾಡುತ್ತಿದ್ದು, ಗದಗದಲ್ಲಿ ಜಿಲ್ಲಾ ಸಂಚಾಲಕರಾಗಿ ದುರಗಪ್ಪ ಹಾಗೂ ಸಂಘಟನಾ ಸಂಚಾಲಕರಾಗಿ ಸತೀಶ ಎಚ್. ಹೂಲಿ, ರಾಮು ಪಿ.ಬಳ್ಳಾರ, ಸಂಗಪ್ಪ ಹೊಸಮನಿ, ಗದಗ ಶಹರ ಘಟಕದ ಸಂಚಾಲಕರಾಗಿ ಯುವರಾಜ ಬಳ್ಳಾರಿ, ಮಹಿಳಾ ಒಕ್ಕೂಟದ ಸಂಚಾಲಕರಾಗಿ ಸುಶೀಲಾ ಚಲವಾದಿ ಅವರೊಂದಿಗೆ ಎಲ್ಲಾ ತಾಲೂಕಿನ ಹಾಗೂ ವಿದ್ಯಾರ್ಥಿ ಘಟಕದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಆದೇಶ ಪತ್ರ ನೀಡಲಾಯಿತು ಎಂದು ಯುವರಾಜ ಬಳ್ಳಾರಿ ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಮದ್ರಸಾ ಕಾಯ್ದೆ ತಿದ್ದುಪಡಿಗೆ ಮುಂದಾದ ಉತ್ತರ ಪ್ರದೇಶ ಸರ್ಕಾರ



■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಮದ್ರಸಾ ಕಾಯ್ದೆಯ ತಿದ್ದುಪಡಿಗೆ ಉತ್ತರ ಪ್ರದೇಶ ರಾಜ್ಯ ಸರ್ಕಾರ ಮುಂದಾಗಿದ್ದು, ಈ ಸಂಬಂಧ ಕರಡು ಮಸೂದೆಯನ್ನು ಸಿದ್ದಪಡಿಸಿದೆ ಎಂದು ವರದಿಯಾಗಿದೆ.

ಉತ್ತರ ಪ್ರದೇಶ ಮದ್ರಸಾ ಕಾಯ್ದೆ-2004ರ ಅಡಿ ಸ್ಥಾಪಿತವಾಗಿರುವ ಮದ್ರಸಾ ಮಂಡಳಿ ಪ್ರಸ್ತುತ 1ನೇ ತರಗತಿಯಿಂದ ಪದವಿವರೆಗಿನ ತರಗತಿಗಳ ಪಠ್ಯ, ಪರೀಕ್ಷೆ ಸೇರಿದಂತೆ ಎಲ್ಲಾ ವಿಷಯಗಳನ್ನು ನಿಯಂತ್ರಣ, ನಿರ್ವಹಣೆ ಮಾಡುತ್ತಿದೆ. ಕಾಯ್ದೆಗೆ ತಿದ್ದುಪಡಿ ತಂದರೆ, ಮದ್ರಸಾ ಮಂಡಳಿ 1ರಿಂದ 12ರವರೆಗಿನ ತರಗತಿಗಳನ್ನು ಮಾತ್ರ ನಿಯಂತ್ರಣ ಮಾಡಲಿದೆ.

ಕೆಲ ಇಸ್ಲಾಮಿಕ್ ಸಂಸ್ಥೆಗಳಲ್ಲಿ 'ಮೌಲವಿ, ಫಾಝಿಲ್' ಎಂಬ ಇಸ್ಲಾಮಿಕ್ ಬಿರುದುಗಳನ್ನು ನೀಡಲಾಗುತ್ತದೆ. ಈ ಪದವಿಗಳನ್ನೂ ಮದ್ರಸಾ ಮಂಡಳಿಯೇ ನಿಯಂತ್ರಣ ಮಾಡುತ್ತಿದೆ. ಅಂದರೆ, ಮದ್ರಸಾ ಮಂಡಳಿಗೆ ಪದವಿ ನೀಡಲು ಅಧಿಕಾರವಿದೆ. ಆದರೆ, 1956ರ ವಿಶ್ವವಿದ್ಯಾನಿಲಯ ಅನುದಾನ ಆಯೋಗ (ಯುಜಿಸಿ) ದ ಕಾಯ್ದೆ ಪದವಿ ನೀಡುವ ಅಧಿಕಾರ ವಿಶ್ವ ವಿದ್ಯಾನಿಲಯಗಳಿಗೆ ಮಾತ್ರ ಇದೆ ಎಂದು ಹೇಳುತ್ತದೆ. ಈ ವಿಚಾರ ಸಂಘರ್ಷಕ್ಕೆ ಕಾರಣವಾಗಬಹುದು. ಇದಕ್ಕೆ ಸೂಕ್ತ ಪರಿಹಾರ ಕಂಡುಕೊಳ್ಳಿ ಎಂದು ಕಳೆದ ತಿಂಗಳು ಸುಪ್ರೀಂ ಕೋರ್ಟ್ ಹೇಳಿತ್ತು. ಹಾಗಾಗಿ, ಉತ್ತರ ಪ್ರದೇಶ ಸರ್ಕಾರ ಮದ್ರಸಾ ಕಾಯ್ದೆಗೆ ತಿದ್ದುಪಡಿ ತಂದು ಪದವಿ ವಿಷಯವನ್ನು ಹೊರಗಿಡಲು ಮುಂದಾಗಿದೆ.

ನಿವೃತ್ತ ಮುಖ್ಯ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ನೇತೃತ್ವದ ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠ 2004ರ ಉತ್ತರ ಪ್ರದೇಶ ಮದ್ರಸಾ ಶಿಕ್ಷಣ ಮಂಡಳಿ ಕಾಯ್ದೆ (ಗಣಣಚಿಡಿ ಕಡಿಚಿಜಝ ಃಠಚಿಡಿಜ ಠಜಿ ಒಚಿಜಡಿಛಿಚಿ ಇಜಣಛಿಚಿಣಠಟಿ ಂಛಿಣ)ಯ ಸಾಂವಿಧಾನಿಕ ಸಿಂಧುತ್ವವನ್ನು 2024ರ ನವೆಂಬರ್ 5ರಂದು ಎತ್ತಿ ಹಿಡಿದಿದೆ. ಈ ಮೂಲಕ ಕಾಯ್ದೆಯನ್ನು ರದ್ದುಗೊಳಿಸಿದ್ದ ಅಲಹಾಬಾದ್ ಹೈಕೋರ್ಟ್ ತೀರ್ಪನ್ನು ಬದಿಗೊತ್ತಿದೆ.

2024ರ ಮಾರ್ಚ್‌ನಲ್ಲಿ, ಅಲಹಾಬಾದ್ ಹೈಕೋರ್ಟ್ ಉತ್ತರ ಪ್ರದೇಶ ಮದ್ರಸಾ ಶಿಕ್ಷಣ ಮಂಡಳಿ ಕಾಯ್ದೆ-2004 ಅನ್ನು ರದ್ದುಗೊಳಿಸಿತ್ತು. ಈ ಕಾಯ್ದೆ ಜಾತ್ಯತೀತತೆಯ ತತ್ವಗಳನ್ನು ಉಲ್ಲಂಘಿಸುತ್ತದೆ ಎಂದು ಹೇಳಿತ್ತು. ಆದರೆ, ಏಪ್ರಿಲ್‌ನಲ್ಲಿ ಮಧ್ಯಂತರ ಆದೇಶ ನೀಡಿದ್ದ ಸುಪ್ರೀಂ ಕೋರ್ಟ್, ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ನಿರ್ಧರಿಸುವವರೆಗೆ ಹೈಕೋರ್ಟ್ ತೀರ್ಪಿಗೆ ತಡೆ ನೀಡಿತ್ತು. ಬಳಿಕ ನವೆಂಬರ್ 5ರಂದು ಅಂತಿಮ ತೀರ್ಪು ಪ್ರಕಟಿಸಿದ ಸುಪ್ರೀಂ ಕೋರ್ಟ್ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಎತ್ತಿ ಹಿಡಿದಿದೆ.

ಕಾಯ್ದೆಯ ಕುರಿತ ಮೇಲ್ಮವಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ಗೆ ಉತ್ತರಿಸಿದ್ದ

ನಾಳೆ ಅಶೋಕ ಹಾರನಹಳ್ಳಿ ನರೇಗಲ್ಲಿಗೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಾಭಾದ ಅಧ್ಯಕ್ಷ ಅಶೋಕ ಹಾರನಹಳ್ಳಿಯವರು ಡಿ. 7ರಂದು ಬೆಳಿಗ್ಗೆ 8.30ಕ್ಕೆ ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ ಎಂದು ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.2025ರ ಜನೇವರಿ 18, 19ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ವಿಪ್ರ ಸಮಾವೇಶದ ಸುವರ್ಣ ಮಹೋತ್ಸವಕ್ಕೆ ವಿಪ್ರ ಬಾಂಧವರನ್ನು ಆಮಂತ್ರಿಸಲು ಹಾರನಹಳ್ಳಿ ಆಗಮಿಸುತ್ತಿದ್ದಾರೆ. ಡಿ. 7ರ ಬೆಳಿಗ್ಗೆ 8.30ಕ್ಕೆ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಈ ನಿಮಿತ್ತ ಸಭೆ ಜರುಗಲಿದ್ದು, ಹನುಮಾನ ಚಾಲೀಸಾ ಪಠಣೆಯ ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಡಾ. ಜಿ.ಕೆ. ಕಾಳೆ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಭೆಯಲ್ಲಿ ಅಶೋಕ ಅವರೊಂದಿಗೆ ರಾಜ್ಯ ಪ್ರಧಾನ ಸಂಚಾಲಕರಾದ ವಿಜಯೇಂದ್ರ ನಾಡಜೋಷಿ, ಕಾರ್ತಿಕ ಬಾಪಟ್ ಮತ್ತು ಎಸ್. ಸುಧಾಕರ ಬಾಬು ಹಾಗೂ ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಮತ್ತಿತರರು ಭಾಗವಹಿಸಲಿದ್ದಾರೆ. ವಿಪ್ರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಯಲ್ಲಿ ಪಾಲ್ಗೊಳ್ಳಲು ಡಾ. ನಾಗರಾಜ ವಿನಂತಿಸಿದ್ದಾರೆ.

ಗದಗ ನಗರದ ಟ್ಯಾಗೋರ್ ರಸ್ತೆಯ ವಿದ್ಯಾರ್ಥಿ ಪವನಕಲ್ಯಾಣ ನಾಗನೂರು ಕಸದಿಂದ ರಸ ಎಂಬಂತೆ ತನಗೆ ದೊರಕಿದ ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಸುಂದರವಾದ ಅಯೋಧ್ಯೆಯ ರಾಮ ಮಂದಿರವನ್ನು ತಯಾರಿಸಿ ತನ್ನ ಭಕ್ತಿಯ ಕಲೆಯನ್ನು ಮೆರೆದು ಮೆಚ್ಚುಗೆಗೆ ಪಾತ್ರನಾಗಿದ್ದಾನೆ.

ಗೋಂದಾವಲೆಕರ ಮಹಾರಾಜರ ಕಾರ್ಯ ಮುಂದುವರೆಸುತ್ತಿರುವ ಶ್ರೀ ದತ್ತಾವಧೂತ ಮಹಾರಾಜರು

ಅಖಂಡ ಹನುಮಾನ್ ಚಾಲೀಸಾ ಪಠಣ ಡಿ.8ಕ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಮನಾಮ ಜಪದ ಮೂಲಕ ಜೀವನ್ಮುಕ್ತಿಯನ್ನು ಪಡೆಯಬಹುದು ಎಂಬುದನ್ನು ಸಾಧಿಸಿ ತೋರಿದವರು ಸದ್ಗುರು ಶ್ರೀ ಬ್ರಹ್ಮಚೈತನ್ಯ ಮಹಾರಾಜರು ಮತ್ತು ಸದ್ಗುರು ಶ್ರೀ ಬ್ರಹ್ಮಾನಂದರು. ಮಹಾರಾಷ್ಟ್ರದ ಗೋಂದಾವಲೆಯನ್ನು ತಮ್ಮ ಕಾರ್ಯಕ್ಷೇತ್ರವನ್ನಾಗಿಸಿಕೊಂಡಿದ್ದ ಅವರು ಕರ್ನಾಟಕದಲ್ಲಿಯೂ ಸಹ ರಾಮನಾಮ ಜಪದ ಪ್ರಸರಣೆಯನ್ನು ಮಾಡಿದರು.

1909ರ ಎಪ್ರಿಲ್ 1ರಂದು ಹೆಬ್ಬಳ್ಳಿಗೆ ಆಗಮಿಸಿದ್ದ ಶ್ರೀ ಬ್ರಹ್ಮಚೈತನ್ಯರು ಅಲ್ಲಿ ತಮ್ಮ ಸ್ಥಿರ ಪಾದುಕೆಗಳನ್ನು ಸ್ಥಾಪಿಸಿ, ಮುಂದೊಂದು ದಿನ ಇದು ಮಹಾನ್ ಕ್ಷೇತ್ರವಾಗಲಿದೆ ಎಂದು ನುಡಿದಿದ್ದರು. ಅವರ ಮಾತು ಇಂದಿಗೆ ಸತ್ಯವಾಗಿದ್ದು, ಶ್ರೀ ದತ್ತಾವಧೂತ ಮಹಾರಾಜರು ಅದನ್ನು ಚೈತನ್ಯಾಶ್ರಮವೆಂದು ಶ್ರದ್ಧಾ ಕೇಂದ್ರವನ್ನಾಗಿಸಿದ್ದಾರೆ.

ರಾಮನಾಮದ ಪ್ರಸರಣೆಯ ಜೊತೆಗೆ ರಾಮನ ಬಂಟ ಹನುಮಂತನ ಹನುಮಾನ್ ಚಾಲೀಸಾ ಪಠಣೆಯನ್ನೂ ಸಹ ಪ್ರಸಾರ ಮಾಡುವ ಮೂಲಕ ಶ್ರೀ ದತ್ತಾವಧೂತ ಮಹಾರಾಜರು ತಮ್ಮ ಗುರುಗಳ ಕಾರ್ಯವನ್ನು ಮುಂದುವರೆಸಿದ್ದಾರೆ. ಈಗಾಗಲೇಹೆಬ್ಬಳ್ಳಿ, ಹುಬ್ಬಳ್ಳಿ, ಬೆಂಗಳೂರು, ಸೂಡಿ ಮುಂತಾದೆಡೆಗಳಲ್ಲಿ ಹನುಮಾನ್ ಚಾಲೀಸಾ ನಡೆದಿದ್ದು, ಡಿ. 8ರಂದು ನರೇಗಲ್ಲದಲಿ ನಡೆಯಲಿದೆ.

ಶ್ರೀ ಬ್ರಹ್ಮಚೈತನ್ಯ ಮಹಾರಾಜರನ್ನು ಹೆಬ್ಬಳ್ಳಿಗೆ ಕರೆತರಲು ಹೆಬ್ಬಳ್ಳಿಯ ವೆಂಕನಗೌಡ ನಾಡಿಗೇರರು ಕುಸಗಲ್ಲಿನಿಂದ 100 ಚಕ್ಕಡಿಗಳನ್ನು

ವ್ಯವಸ್ಥೆ ಮಾಡಿ ಹೆಬ್ಬಳ್ಳಿಗೆ ಕರೆದುಕೊಂಡು ಬಂದಿದ್ದರು. 1984ರ ಜನೇವರಿ 26ರಂದು ಗುರುಗಳ ಅಪ್ಪಣೆಯಂತೆ ಹೆಬ್ಬಳ್ಳಿಗೆ ಆಗಮಿಸಿದ ಶ್ರೀ ದತ್ತಾವಧೂತರು, ಅಷ್ಟೇ ಶ್ರದ್ಧಾಭಕ್ತಿಗಳಿಂದ



ಚೈತನ್ಯಾಶ್ರಮವನ್ನು ಸರ್ವ ಭಕ್ತರ ಸಹಾಯ ಸಹಕಾರದೊಂದಿಗೆ ಬೃಹತ್ ಪ್ರಮಾಣದಲ್ಲಿ ಕಟ್ಟಿ ಬೆಳೆಸಿದ್ದಾರೆ.

ಜಗತ್ತಿನ ಬಹುತೇಕ ಧಾರ್ಮಿಕ ಸ್ಥಳಗಳಿಗೆ ಭೇಟಿ ನೀಡಿರುವ ನನಗೆ ಇಲ್ಲಿ ಸಿಕ್ಕಷ್ಟು ಆನಂದ, ಸಮಾಧಾನ ಬೇರೆಲ್ಲೂ ಸಿಕ್ಕಿಲ್ಲ ಎಂದು ಇನ್ಫೋಸಿಸ್‌ನ ಡಾ. ಸುಧಾಮೂರ್ತಿಯವರು ಶ್ರೀ ಚೈತನ್ಯಾಶ್ರಮದ ಬಗ್ಗೆ ಹೇಳಿದ್ದಾರೆ.

ಗದಗ ಜಿಲ್ಲೆಯಲ್ಲಿ ನರೇಗಲ್ಲದ ಶ್ರೀ



ದತ್ತಾತ್ರೇಯ ಅತ್ಯಂತ ಜಾಗೃತ ಭಗವಂತನೆನಿಸಿದ್ದಾನೆ. ಅವನನ್ನು ಸ್ಮರಿಸಿ ಯಾವುದೇ ಕಾರ್ಯವನ್ನು ಹಮ್ಮಿಕೊಂಡರೂ ಅದು ಸಂಪೂರ್ಣವಾಗಿ ಯಶಸ್ವಿಯಾಗುವುದರಲ್ಲಿ ಸಂದೇಹವಿಲ್ಲ. ಇದಕ್ಕೆ 2007ರಲ್ಲಿ ನಡೆದ ಶ್ರೀ ಸಹಸ್ರ ಚಂಡಿಕಾ ಮಹಾಯಾಗ, ಶ್ರೀ ದತ್ತಾತ್ರೇಯ ದೇವಸ್ಥಾನದ ಶತಮಾನೋತ್ಸವ, ಮತ್ತಿತರ ಧಾರ್ಮಿಕ ಕಾರ್ಯಗಳೇ ಸಾಕ್ಷಿಯಾಗಿವೆ. ಹೀಗಾಗಿ ನರೇಗಲ್ಲ, ಶ್ರೀ ದತ್ತಾತ್ರೇಯನ ಒಂದು ಕ್ಷೇತ್ರವೆಂದೇ ಪರಿಗಣಿಸಲ್ಪಟ್ಟಿದ್ದು, ಡಿ.6ರಿಂದ ಎಲ್ಲ ಕಾರ್ಯಗಳು ಪ್ರಾರಂಭವಾಗಲಿವೆ.

ಕಳೆದ ನಾಲ್ಕು ದಶಕಗಳಿಂದ ತಮ್ಮ ನಿತ್ಯದ ಕಾಯಕದೊಂದಿಗೆ ಅನೇಕ ಧಾರ್ಮಿಕ ಗ್ರಂಥಗಳ ರಚನೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ಶ್ರೀ ದತ್ತಾವಧೂತ ಮಹಾರಾಜರು 13 ಕೋಟಿ ಹನುಮಾನ್ ಚಾಲೀಸಾ ಪಠಣೆಯ ಸಂಕಲ್ಪ ಮಾಡಿದ್ದಾರೆ. ತನ್ನಿಮಿತ್ತ ಡಿ. 6ರ ಸಂಜೆ ನರೇಗಲ್ಲದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಆಗಮಿಸಲಿರುವ ಪೂಜ್ಯರು ಡಿ. 7ರಂದು ಶ್ರೀ ದತ್ತಯಾಗ ಮತ್ತು ಡಿ. 8ರಂದು 13 ತಾಸುಗಳ ಅಖಂಡ ಹನುಮಾನ್ ಚಾಲೀಸಾ ಪಠಣದಲ್ಲಿ ಪಾಲ್ಗೊಂಡು ಭಕ್ತರೆಲ್ಲರನ್ನೂ ಅನುಗ್ರಹಿಸಲಿದ್ದಾರೆ.

ಚಳ್ಳಕೆರೆ : ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಸಣ್ಣ ಕೈಗಾರಿಕಾ ನಿಗಮ ಮಂಡಳಿ ಅಧ್ಯಕ್ಷರೂ ಆದ ಟಿ ರಘುಮೂರ್ತಿ ಅವರು ಮುಖ್ಯಮಂತ್ರಿಗಳ ಕಾವೇರಿ ನಿವಾಸಕ್ಕೆ ಗುರುವಾರ ಭೇಟಿ ನೀಡಿ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮನವಿ ಪತ್ರ ನೀಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗೆ ಚರ್ಚಿಸಿದರು. ಇದಕ್ಕೆ ಸಕರಾತ್ಮಕವಾಗಿ ಸ್ಪಂದಿಸಿದ ಸಿದ್ದರಾಮಯ್ಯನವರು, ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಒಪ್ಪಿಗೆ ನೀಡಿ ಭರವಸೆ ಕೊಟ್ಟರು. ಈ ಸಂದರ್ಭದಲ್ಲಿ ಸಚಿವರಾದ ಭೈರತಿ ಸುರೇಶ್ ಹಾಗೂ ಅಧಿಕಾರಿಗಳು ಇದ್ದರು.

ಆಶಾ ಕಾರ್ಯಕರ್ತೆಯರಿಂದ ಶಾಸಕರಿಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಶಾ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದ ಪ್ರೋತ್ಸಾಹ ಧನ, ರಾಜ್ಯ ಸರ್ಕಾರದ ನಿಶ್ಚಿತ ಮಾಸಿಕ ಗೌರವಧನ ಹಾಗೂ ಪ್ರಣಾಳಿಕೆಯ ಭರವಸೆಯ ಮೊತ್ತ ಒಟ್ಟುಗೂಡಿಸಿ 15 ಸಾವಿರ ರೂ ಮಾಸಿಕ ನಿಶ್ಚಿತ ಗೌರವಧನ ನೀಡಬೇಕು ಎನ್ನುವ ಆಶಾ ಕಾರ್ಯಕರ್ತೆಯರ ಬೇಡಿಕೆ ಈಡೇರಿಸಲು ಬೆಳಗಾವಿ ಅಧಿವೇಶನದಲ್ಲಿ ಸರ್ಕಾರವನ್ನು ಒತ್ತಾಯಿಸಬೇಕೆಂದು ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿಯವರಿಗೆ ಗುರುವಾರ ತಾಲೂಕಿನ ಆಶಾ ಕಾರ್ಯಕರ್ತೆಯರು ಮನವಿ ಅರ್ಪಿಸಿದರು.

ರಾಜ್ಯ ಸರ್ಕಾರ ಈಗ ನೀಡುತ್ತಿರುವ ರೂ.5000 ಮಾಸಿಕ ನಿಶ್ಚಿತ ಗೌರವಧನ ಮತ್ತು ವಿವಿಧ ಚಟುವಟಿಕೆಗಳಿಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ರೂ.7000 ಪ್ರೋತ್ಸಾಹಧನ ಹಾಗೂ ರಾಜ್ಯ ಸರ್ಕಾರದ ಪ್ರತಿಷ್ಠೆಯ ಐದು ಗ್ಯಾರಂಟಿಗಳ ಜೊತೆಯಲ್ಲಿ ಆಶಾ ಕಾರ್ಯಕರ್ತೆಯರಿಗೆ ಗೌರವ ಧನ ಹೆಚ್ಚಿಸುವುದಾಗಿ ಪ್ರಣಾಳಿಕೆಯಲ್ಲಿ ಭರವಸೆಯ ನೀಡಿರುವ ರೂ.3000 ಗಳನ್ನು ಒಟ್ಟುಗೂಡಿಸಿ ಮಾಸಿಕ ರೂ.15,000 ಗೌರವಧನ ನಿಗದಿ ಮಾಡಬೇಕು ಎನ್ನುವ ಬೇಡಿಕೆ ಈಡೇರಿಲ್ಲ. ಅಧಿವೇಶನದಲ್ಲಿ ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸುವಂತೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿದ ಶಾಸಕ ಡಾ. ಚಂದ್ರು ಲಮಾಣಿ, ಆಶಾಕಾರ್ಯಕರ್ತೆಯರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸದನದಲ್ಲಿ ಅವಕಾಶ ಕಲ್ಪಿಸುವಂತೆ ಮನವಿ ಮಾಡಿ ಸದನದಲ್ಲಿ ಈ ಬಗ್ಗೆ ಸರಕಾರದ ಗಮನ ಸೆಳೆಯುವ ಕಾರ್ಯವನ್ನು ಮಾಡುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ಸುಂದ್ರಮ್ಮ ಪಾಟೀಲ, ತಾಲೂಕಾಧ್ಯಕ್ಷೆ ಸುಮಂಗಳಾ ತಳವಾರ, ಶಾರದಾ ಬಡಿಗೇರ, ಕಮಲಾ ಲಮಾಣಿ, ಮಾಮಕ್ಕ ಬನ್ನಿಮಟ್ಟಿ, ಪುಷ್ಪಾ ಹವಳದ, ಪ್ರತಿಮಾ ಮೂರ್ಖಂಡಿ, ಶಾಂತವೀರಮ್ಮ ಬಿಳಗೆ, ಚನ್ನವ್ವ ಕಾರಬಾರಿ, ಜಯಶ್ರೀ ಕಾರಬಾರಿ, ವನಜಾ ಡಂಬಳ, ಸುಧಾ ಮಂಜಲಾಪೂರ, ರುಕ್ಮಿಣಿ ವಂದಾಲ, ಸುಧಾ ನರಸಮ್ಮನವರ, ಜಯವ್ವ ಆನೆಪ್ಪನವರ, ರೂಪಾ ನಾಯಕ, ಶಿವಲೀಲಾ ಕೋಟಿಹಾಳಮಠ ಸೇರಿದಂತೆ ಅನೇಕರಿದ್ದರು.

ಭೂಮಿ ಯೋಜನೆಯ ಅರ್ಜಿಗಳ ವಿಲೇವಾರಿ: ರೋಣ ತಾಲೂಕು ರಾಜ್ಯಕ್ಕೆ ಪ್ರಥಮ

ಗದಗ ಜಿಲ್ಲೆ ರಾಜ್ಯಕ್ಕೆ ದ್ವಿತೀಯ ಸ್ಥಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಗೆ ಸಂಬಂಧಿಸಿದ ಭೂಮಿ ಯೋಜನೆಯಡಿ ನವಂಬರ್-2024 ರ ಮಾಹೆಯಲ್ಲಿ ಸಾರ್ವಜನಿಕರಿಂದ ಸ್ವೀಕರಿಸಲಾಗಿರುವ ಹಕ್ಕು ಬದಲಾವಣೆ, ಹಕ್ಕು ಮತ್ತು ಋಣಗಳ ಅರ್ಜಿಗಳನ್ನು ನಿಗಧಿತ ಅವಧಿಯೊಳಗೆ ಶೀಘ್ರ ವಿಲೇವಾರಿ ಮಾಡಿದ್ದರಿಂದ ರೋಣ ತಾಲೂಕು ರಾಜ್ಯ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಿ ರಾಜ್ಯದ 237 ತಾಲೂಕುಗಳ ಪೈಕಿ ಪ್ರಥಮ ಸ್ಥಾನ ಪಡೆದಿದೆ. ಅದರಂತೆ ಗದಗ ಜಿಲ್ಲೆಯು ರಾಜ್ಯ ಮಟ್ಟದಲ್ಲಿ ಎರಡನೇ ಸ್ಥಾನ ಪಡೆದಿದೆ.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಗುರುವಾರ ಜಿಲ್ಲಾಡಳಿತ ಭವನದಲ್ಲಿ ರೋಣ ತಹಸೀಲ್ದಾರ ನಾಗರಾಜ. ಕೆ ಹಾಗೂ ಅವರ ಕಾರ್ಯಾಲಯದ ಭೂಮಿ ಶಾಖೆಯ ಸಿಬ್ಬಂದಿಗಳಿಗೆ ಅಭಿನಂದನಾ ಪತ್ರ ನೀಡಿ ಅಭಿನಂದಿಸಿದ್ದಾರೆ.

ರೋಣ ತಾಲೂಕಿನ ಸಿಬ್ಬಂದಿಯ ಕಾರ್ಯನಿರ್ವಹಣೆಯು ಪ್ರಶಂಸನೀಯ ಅಲ್ಲದೇ ಈ ಸಾಧನೆ ಇತರರಿಗೂ ಮಾದರಿಯಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ.

ನಿಧನ

ಮೌನೇಶ ಬಡಿಗೇರ

ಲಕ್ಷ್ಮೇಶ್ವರ: ಗದಗ ಜಿಲ್ಲಾ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಲಕ್ಷ್ಮೇಶ್ವರ ಪಟ್ಟಣ ಈಶ್ವರ ನಗರದ ನಿವಾಸಿ ಮೌನೇಶ ಹೊಳಲಪ್ಪ ಬಡಿಗೇರ (38) ಗುರುವಾರ ಹೃದಯಾಘಾತದಿಂದ ನಿಧನ ಹೊಂದಿದರು. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

ವಿದ್ಯಾರ್ಥಿಗಳಿಗಾಗಿ ಏಕಪಾತ್ರಾಭಿನಯ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಾಂಸ್ಕೃತಿಕ ಲೋಕಕ್ಕೆ ತನ್ನದೇ ವಿಶಿಷ್ಟ ಸಾಂಸ್ಕೃತಿಕ ಸೇವೆ ಸಲ್ಲಿಸುತ್ತಿರುವ ನಗರದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯು ಮಕ್ಕಳಲ್ಲಿ ರಂಗಾಸಕ್ತಿ ಮೂಡಿಸುವ ಹಾಗೂ ಅವರಲ್ಲಿನ ಪ್ರತಿಭೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಮಕ್ಕಳ ರಂಗ ಪ್ರತಿಭಾ ಪ್ರದರ್ಶನ ಅಯೋಜಿಸುತ್ತ ಬಂದಿದ್ದು, ಪ್ರಸಕ್ತ ವರ್ಷ ಮಕ್ಕಳಲ್ಲಿನ ರಂಗ ಪ್ರತಿಭೆ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಏಕಪಾತ್ರಾಭಿನಯ ಸ್ಪರ್ಧೆಯನ್ನು ಆಯೋಜಿಸಿದೆ.

ಡಿಸೆಂಬರ್ ಕೊನೆ ವಾರದಲ್ಲಿ ನಡೆಯುವ 'ರಂಗ ಸೌರಭ' ಕಾರ್ಯಕ್ರಮದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕವಾಗಿ ಏಕಪಾತ್ರಾಭಿನಯ ಸ್ಪರ್ಧೆ ನಡೆಯಲಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಎರಡು ವಿಭಾಗದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನದೊಂದಿಗೆ 'ರಂಗ ಕುಸುಮ' ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಭಾಗವಹಿಸಲು ಆಸಕ್ತ ವಿದ್ಯಾರ್ಥಿಗಳು ಡಿ.25ರ ಒಳಗಾಗಿ ಸ್ಪರ್ಧೆಯ ದಿನಾಂಕ, ಸಮಯ, ಸ್ಥಳ ಸೇರಿದಂತೆ ಹೆಚ್ಚಿನ ಮಾಹಿತಿಯನ್ನು ತಿಳಿದುಕೊಳ್ಳಲು ಮತ್ತು ಹೆಸರು ನೋಂದಾಯಿ ಸಿಕೊಳ್ಳಲು ಮೊಬೈಲ್ ನಂಬರ್-9972391031 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಅಧ್ಯಕ್ಷ ಮೌನೇಶ ಸಿ. ಬಡಿಗೇರ(ನರೇಗಲ್ಲ) ಪತ್ರಿಕಾ ಪ್ರಕಟಣೆ ಮೂಲಕ ಕೋರಿದ್ದಾರೆ.

ಬೆಂಗಳೂರಿನ ನಯನ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಲ್. ಹನುಮಂತಯ್ಯ ಅಭಿಮತ

ಬ್ಯಾಂಕ್ ಪರೀಕ್ಷೆಗಳನ್ನು ಕನ್ನಡದಲ್ಲೇ ನಡೆಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ/ಬೆಂಗಳೂರು

ಇಂದು ಕೇಂದ್ರ ಸ್ವಾಮ್ಯದ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಆಯ್ಕೆ ಪ್ರಕ್ರಿಯೆ ರಾಷ್ಟ್ರ ಮಟ್ಟದಲ್ಲಿ ಹಿಂದಿ-ಇಂಗ್ಲಿಷ್‌ಗಳಲ್ಲಿ ಮಾತ್ರ ನಡೆಯುತ್ತಿದ್ದು, ಸ್ಥಳೀಯರಿಗೆ ಬ್ಯಾಂಕ್‌ಗಳಲ್ಲಿ ಕೆಲಸ ಸಿಗುತ್ತಿಲ್ಲ. ಕನ್ನಡಿಗರಿಗೆ ಬ್ಯಾಂಕ್‌ಗಳಲ್ಲಿ ಸೂಕ್ತ ಅವಕಾಶ ಸಿಗಲು ಆಯ್ಕೆ ಪರೀಕ್ಷೆಗಳು ಕನ್ನಡದಲ್ಲೂ ನಡೆಯಬೇಕು ಎಂದು ಮಾಜಿ ರಾಜ್ಯಸಭಾ ಸದಸ್ಯ, ಖ್ಯಾತ ಸಾಹಿತಿ ಡಾ. ಎಲ್. ಹನುಮಂತಯ್ಯ ಆಗ್ರಹಿಸಿದರು.

ಅವರು ಬೆಂಗಳೂರಿನ ನಯನ ಸಭಾಂಗಣದಲ್ಲಿ ಕನ್ನಡ ಗೆಳೆಯರ ಬಳಗ, ಕರ್ನಾಟಕ ಕಾರ್ಮಿಕಲೋಕ ಸಂಯುಕ್ತವಾಗಿ ಆಯೋಜಿಸಿದ್ದ ಪ್ರಶಸ್ತಿಗಳ ಪ್ರದಾನ, ಪುಸ್ತಕ ಬಹುಮಾನ, ಕನ್ನಡ ಮಾಧ್ಯಮದ ಮಕ್ಕಳಿಗೆ 'ಸನ್ಮಾನ-ಬಹುಮಾನ' ಮತ್ತು ಉತ್ತಮ ಸರ್ಕಾರಿ ಶಾಲೆಗೆ ಬಹುಮಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡುತ್ತಿದ್ದರು.

ಯಾವುದೇ ಸಾರ್ವಜನಿಕ ಬ್ಯಾಂಕ್‌ಗಳಿಗೆ ಹೋದರೂ ಕನ್ನಡ ಮಾತನಾಡುವ ಸಿಬ್ಬಂದಿ ಸಿಗವುದು ದುರ್ಲಭವಾಗಿದೆ. ಇದರಿಂದ ಸ್ಥಳೀಯರು ಬ್ಯಾಂಕ್ ವ್ಯವಹಾರ ನಡೆಸಲು ಒದ್ದಾಡುವ ಪರಿಸ್ಥಿತಿ ಇದೆ. ಉದ್ಯೋಗದ ಜೊತೆಗೆ ನಾವು ಕನ್ನಡದ ಭವಿಷ್ಯದ ದೃಷ್ಟಿಯಿಂದ ಸರ್ಕಾರಿ ಕನ್ನಡ ಶಾಲೆಗಳನ್ನು ಉಳಿಸಲು ಗಮನ ನೀಡಬೇಕಿದೆ. ಈ ನಿಟ್ಟಿನಲ್ಲಿ ಕನ್ನಡ ಸಂಘಟನೆಗಳು ಸರ್ಕಾರದ ಮೇಲೆ ಒತ್ತಡ ತರಬೇಕು. ಉಳ್ಳವರು ಸರ್ಕಾರದ ಶಾಲೆಗಳನ್ನು ದತ್ತು ಪಡೆದು ಉತ್ತಮ ಸೌಲಭ್ಯ ಕಲ್ಪಿಸಬೇಕು ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಿಕಟಪೂರ್ವ ಅಧ್ಯಕ್ಷ ಡಾ. ಟಿ.ಎಸ್. ನಾಗಾಭರಣ ಮಾತನಾಡಿ, 1956ರಲ್ಲಿ ಭಾಷಾವಾರು ಪ್ರಾಂತಗಳ ರಚನೆಯಾದಾಗ ರಾಜ್ಯದ ಗಡಿ, ಅಧಿಕಾರಗಳಂತಹ ವಿಚಾರವನ್ನು ಸಂವಿಧಾನಕ್ಕೆ ಸೇರಿಸಲಾಯಿತು. ಆದರೆ, ರಾಜ್ಯ ಭಾಷೆಗಳ ಸ್ಥಾನಮಾನ ವ್ಯಾಪ್ತಿಯ ಬಗ್ಗೆ ಸಂವಿಧಾನಕ್ಕೆ ಅಗತ್ಯ ಮಾರ್ಪಾಡು ಮಾಡಲಿಲ್ಲ. ಹಾಗಾಗಿ ಕನ್ನಡ ಶಿಕ್ಷಣ, ಆಡಳಿತ, ಸಾರ್ವಜನಿಕ ವಲಯಗಳ ಬಳಕೆಯ ಬಗ್ಗೆ ಗೊಂದಲವಿದೆ. ಇಂದು ಕನ್ನಡವೂ ಸೇರಿದಂತೆ ಎಲ್ಲ ರಾಜ್ಯದ ಭಾಷೆಗಳ ಉಳಿವಿಗೆ ಸಾಂವಿಧಾನಿಕವಾಗಿಯೇ ಬದಲಾವಣೆ ತರುವ ಅಗತ್ಯವಿದೆ ಎಂದು ಹೇಳಿದರು.

ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮದಲ್ಲಿ ಬಿಇಓ ಎಚ್.ಎನ್. ನಾಯಕ್

ಪುರಾತನ ಸ್ಮಾರಕಗಳು ನಮ್ಮ ಸಂಸ್ಕೃತಿಯ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುರಾತನ ಸ್ಮಾರಕಗಳು ನಮ್ಮ ಸಂಸ್ಕೃತಿ, ಇತಿಹಾಸವನ್ನು ಸಾರುವ ಹೆಗ್ಗುರುತುಗಳಾಗಿದ್ದು, ಅವುಗಳನ್ನು ಸಂರಕ್ಷಿಸುವ ಕಾರ್ಯ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಅಭಿಮತ ವ್ಯಕ್ತಪಡಿಸಿದರು.

ಅವರು ಲಕ್ಷ್ಮೇಶ್ವರದ ಪುರಾತನ ಪ್ರಸಿದ್ಧ ಸೋಮೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾದ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ವ್ಯಾಪ್ತಿಯ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಪುರಾತನ ಸ್ಮಾರಕಗಳು ನಮ್ಮ ಹಿರಿಯರ ಸಾಧನೆಗಳ ಹೆಜ್ಜೆ ಗುರುತುಗಳು. ಪುರಾತನ ಪ್ರಜ್ಞೆಯನ್ನು ಜಾಗೃತಗೊಳಿಸುವ ಕಾರ್ಯಕ್ರಮವೇ ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮದ ಉದ್ದೇಶವಾಗಿದೆ. ಡಾ. ಸುಧಾಮೂರ್ತಿಯವರು ಪಟ್ಟಣದ ಈ ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನ ಜೀರ್ಣೋದ್ಧಾರಗೊಳಿಸಿರುವದರಿಂದ ಅನೇಕ ಮಹತ್ವದ ವಿಷಯಗಳು ತಿಳಿಯುವಂತಾಯಿತು. ಪುರಾತನ ಸ್ಮಾರಕಗಳು ನಮ್ಮ ಸಂಸ್ಕೃತಿಯ ಪ್ರತೀಕಗಳಾಗಿವೆ. ಅವುಗಳ ಬಗ್ಗೆ ಜಾಗೃತಿ ಹೊಂದಬೇಕು ಎಂದು ಕರೆ ನೀಡಿದರು.

ಸೋಮೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿಯ ಕೋಶಾಧ್ಯಕ್ಷ ಚೆನ್ನಪ್ಪ ಜಗಲಿ ಮಾತನಾಡಿ, ನಮ್ಮ ಹಿರಿಯರ ಸಂಸ್ಕೃತಿ-ಸಂಪ್ರದಾಯಗಳನ್ನು ಆಧುನಿಕತೆಯ ನೆಪದಲ್ಲಿ ದೂರ ಇಡುತ್ತಿದ್ದೇವೆ. ಇದು ಸೂಕ್ತವಲ್ಲ. ನಮ್ಮ ಸಂಸ್ಕೃತಿಗಳನ್ನು ನಾವು ಮರೆಯಬಾರದು. ಸೋಮೇಶ್ವರ

ದೇವಸ್ಥಾನ ಸಹಸ್ರ ವರ್ಷಗಳಿಂದ ನಮ್ಮ ಪರಂಪರೆಗೆ ಸಾಕ್ಷಿಯಾಗಿ ನಿಂತಿದೆ ಎಂದರು.

ಪುರಸಭಾ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಸೋಮೇಶ್ವರ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಆನಂದ ಮುಳಗುಂದ ಮಾತನಾಡಿದರು. ಪುರಸಭಾ ಸದಸ್ಯರಾದ ಶೋಭಾ ಮೆಣಸಿನಕಾಯಿ, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ವೈ.ಬಿ. ಜಿಗಳೂರ, ಬಿ.ಸಿ. ಪಟ್ಟೇದ, ಎಲ್.ಎ. ನಡುವಿನಮನಿ, ಸುರೇಶ ರಾಚನಾಯ್ಕರ, ಬಸವರಾಜ ಮೆಣಸಿನಕಾಯಿ, ಜಿ.ಎಸ್. ಗುಡಗೇರಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ತಾಲೂಕಾ ನೋಡಲ್ ಅಧಿಕಾರಿ ಈಶ್ವರ ಮಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮೊರಾರ್ಜಿ ದೇಸಾಯಿ ವಸತಿ ಶಾಲೆ ಗೊಜನೂರಿನ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ನಾಗರಾಜ ಮಜ್ಜಿಗುಡ್ಡ ಸ್ವಾಗತಿಸಿದರು. ಜಿ.ಎಸ್. ಗುಡಗೇರಿ ವಂದಿಸಿದರು. ಲಕ್ಷ್ಮೇಶ್ವರ ಉತ್ತರ ವಲಯದ ಸಿ.ಆರ್.ಪಿ ಉಮೇಶ ನೇಕಾರ ಕಾರ್ಯಕ್ರಮ ನಿರೂಪಿಸಿದರು.

ಶಿಕ್ಷಕ ಬಿ.ಎಸ್.ಕೊಪ್ಪದ, ಎಂ.ಜಿ. ಬಡಿಗೇರ, ನಾಗರಾಜ ಮಜ್ಜಿಗುಡ್ಡ, ಉಮೇಶ ನೇಕಾರ, ಜಿ.ಎಸ್. ಗುಡಗೇರಿ, ವಿ.ಜಿ. ಜೋಗೋಜಿ ನಿರ್ಣಾಯಕರಾಗಿ ಭಾಗವಹಿಸಿದ್ದರು. 23 ಪ್ರೌಢಶಾಲೆಗಳ ನೂರಾರು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ವಿಜೇತ ವಿದ್ಯಾರ್ಥಿಗಳು

ಪ್ರಬಂಧ ಸ್ಪರ್ಧೆ: ಲಕ್ಷ್ಮೀ ದೊಡ್ಡಗೌಡರ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಗೊಜನೂರ (ಪ್ರಥಮ), ಸಮೀಕ್ಷಾ ಅಂಗಡಿ ಸರ್ಕಾರಿ ಪ್ರೌಢಶಾಲೆ ಯಲ್ಲಾಪುರ (ದ್ವಿತಿಯ), ಅಮೃತ ಹುಬ್ಬಳ್ಳಿ ಭೀಮರಡ್ಡಿ ಅಳವಂಡಿ ಕೆಪಿಎಸ್ ಬೆಳ್ಳಟ್ಟಿ (ತೃತೀಯ).

ಭಾಷಣ ಸ್ಪರ್ಧೆ: ರೇಖಾ ಬಾಕಳೆ ಸರಕಾರಿ ಪ್ರೌಢಶಾಲೆ, ಲಕ್ಷ್ಮೇಶ್ವರ (ಪ್ರಥಮ), ವೀಣಾ ವಡ್ಡಟ್ಟಿ, ಭೀಮರಡ್ಡಿ ಅಳವಂಡಿ ಕೆಪಿಎಸ್ ಬೆಳ್ಳಟ್ಟಿ (ದ್ವಿತೀಯ), ಪೂರ್ಣಿಮಾ ಸೂರಣಗಿ, ಅನ್ನದಾನೇಶ್ವರ ಪ್ರೌಢಶಾಲೆ ಬನ್ನಿಕೊಪ್ಪ (ತೃತಿಯ)

ರಸಪ್ರಶ್ನೆ ಸ್ಪರ್ಧೆ: ಎನ್‌ಜಿಪಿ ಸರ್ಕಾರಿ ಪ್ರೌಢಶಾಲೆ, ಮಾಡಳ್ಳಿ (ಪ್ರಥಮ), ಭೀಮರಡ್ಡಿ ಅಳವಂಡಿ ಕೆಪಿಎಸ್ ಬೆಳ್ಳಟ್ಟಿ (ದ್ವಿತೀಯ), ಸರಕಾರಿ ಪ್ರೌಢಶಾಲೆ ಗೊಜನೂರು (ತೃತೀಯ).

ಚಿತ್ರಕಲಾ ಸ್ಪರ್ಧೆ: ಉಮೇಶ ಪೂಜಾರ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಒಡೆಯರ ಮಲ್ಲಾಪುರ (ಪ್ರಥಮ), ದೇವಿಪ್ರಸಾದ ಕುದುರಿ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಗೊಜನೂರು (ದ್ವಿತೀಯ), ಯಶವಂತ ಬಡಿಗೇರ ಸರ್ಕಾರಿ ಪ್ರೌಢಶಾಲೆ ಮಾಡಳ್ಳಿ (ತೃತೀಯ).

ಚುನಾವಣೆ ಮಹತ್ವ ತಿಳಿದು ಜಾಗೃತರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಮತದಾರರು ಎನ್.ವಿ.ಡಿ ಸ್ಪರ್ಧೆಯಲ್ಲಿ ಭಾಗವಹಿಸಿ ಚುನಾವಣೆಯ ಮಹತ್ವ ತಿಳಿದು ಜಾಗೃತರಾಗಿ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ನಗರದ ಸರ್ಕಾರಿ ಪದವಿಪೂರ್ವ ಕಾಲೇಜನಲ್ಲಿ ಗುರುವಾರ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾಡಳಿತ, ಜಿ.ಪಂ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಶಾಲಾ ಶಿಕ್ಷಣ ಇಲಾಖೆ (ಪದವಿ-ಪೂರ್ವ) ಸಹಯೋಗದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಎನ್.ವಿ.ಡಿ ಸ್ಪರ್ಧೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ನೂತನ ಮತ್ತು

ಭವಿಷ್ಯದ ಯುವ ಮತದಾರರಲ್ಲಿ ಚುನಾವಣೆ ಮತ್ತು ಮತದಾನ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಜಾಗೃತಿ ಮೂಡಿಸುವ ಸಲುವಾಗಿ ವಿಶ್ವವಿದ್ಯಾಲಯಗಳು ಸೇರಿದಂತೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ 'ಮತದಾರರ ಸಾಕ್ಷರತಾ ಸಂಘ' (ಇಟಜಜಭಿಣಠಡಿಚಿಟ ಖಣಜಡಿಚಿಭಿಥಿ ಅಟಣಭಿ) ಗಳನ್ನು ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಕೇಂದ್ರಗಳಲ್ಲಿ ಚುನಾವಣಾ ಪಾಠಶಾಲೆ (ಚುನಾವಣಾ ಜಾಗೃತಿ ಸಂಘ) ಗಳನ್ನು ಈಗಾಗಲೇ ಸ್ಥಾಪಿಸಲಾಗಿದೆ. ಈ ಶೈಕ್ಷಣಿಕ ಸಂಸ್ಥೆಗಳಲ್ಲಿ ಯುವ ಮತದಾರರಿಗೆ ಚುನಾವಣೆ ಮಹತ್ವ, ಜಾಗೃತಿ ಮೂಡಿಸುವ ಹಾಗೂ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳುವ ವಿಷಯಾಧಾರಿತ ಕನ್ನಡ, ಆಂಗ್ಲ ಭಾಷೆಯಲ್ಲಿ ಪ್ರಬಂಧ ರಚಿಸುವುದು, ರಸ ಪ್ರಶ್ನೆ, ಮತ್ತು ಭಿತ್ತಿಚಿತ್ರಗಳನ್ನು ಬಿಡಿಸುವುದು ಹಾಗೂ ಕಡಿಮೆ ಮತದಾನವಾಗಿರುವ ನಗರ ಪ್ರದೇಶದ ಚುನಾವಣೆಯಲ್ಲಿ ಭಾಗವಹಿಸುವಿಕೆಯಿಂದ ಆಗುವ ಪ್ರಯೋಜನೆಗಳು ಕುರಿತು ಕಿರು ನಾಟಕ ಸ್ಪರ್ಧೆಗಳನ್ನು ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲು ವೇಳಾಪಟ್ಟಿಯನ್ನು ಹೊರಡಿಸಿಲಾಗಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸಿದ್ಧಲಿಂದ ಬಂಡು ಮಸನಾಯಕ, ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ಪೂರ್ಣಿಮಾ ಹೊಸಮನಿ, ಜಿಲ್ಲಾ ರಾಜ್ಯಶಾಸ್ತ್ರ ಉಪನ್ಯಾಸಕರ ವೇದಿಕೆ ಅಧ್ಯಕ್ಷ ಎಂ.ಎಸ್. ಮುಲ್ಲಾ, ಕೆ.ಎಂ. ಮಾಕಣ್ಣವರ, ಎಸ್.ಐ. ಮೇಟಿ, ನವೀನ್ ಅಳವಂಡಿ, ಜಿಲ್ಲಾ ಇಐಅ ಜಿಲ್ಲಾ ಸಂಯೋಜಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವುಗಳ ಸಹಯೋಗದಲ್ಲಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಬಾಲ್ಯವಿವಾಹ, ಪೊಕ್ಸೋ, ಆರ್.ಟಿ.ಇ ಕಾಯ್ದೆ ಕುರಿತು ಅರಿವು ಕಾರ್ಯಕ್ರಮವನ್ನು ಗಜೇಂದ್ರಗಡದ ಎಸ್. ಎಮ್. ಭೂಮರಡ್ಡಿ ಪದವಿಪೂರ್ವ ಕಾಲೇಜಿನಲ್ಲಿ ಹಮ್ಮಿಕ್ಕೊಳ್ಳಲಾಗಿತ್ತು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಕಾರ್ಯಕ್ರಮ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಜಿ.ಬಿ. ಗುಡಿಮನಿ ವಹಿಸಿದ್ದರು. ಮಂಜುನಾಥ ಅಸೂಟಿ ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ ಕುರಿತು ಹಾಗೂ ಶ್ರೀಧರ ಅವರು ಮಾನಸಿಕ ಆರೋಗ್ಯದ ಕುರಿತು ಉಪನ್ಯಾಸ ನೀಡಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್. ಬಿ. ಮಸನಾಯಕ್, ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು, ಉಪನ್ಯಾಸಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎ.ಎಸ್. ವಡ್ಡರ್ ಸ್ವಾಗತಿಸಿದರು. ಕಾಲೇಜಿನ ಉಪನ್ಯಾಸಕ ಬಿ.ಎಂ. ಜೂಚನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಸಮಾಜದಲ್ಲಿ ಮಕ್ಕಳು ತಮ್ಮ ಹಕ್ಕುಗಳನ್ನು ಪಡೆಯುವ ಮೂಲಕ ಸಂವಿಧಾನತ್ಮಾಕವಾಗಿ ಕಾನೂನು ಒಳಗೊಂಡಂತೆ ತಮ್ಮ ವಿದ್ಯಾಭ್ಯಾಸಗಳ ಮೂಲಕ ತಮ್ಮ ಉತ್ತಮ ಉದ್ಯೋಗವನ್ನು ಪಡೆದು ನ್ಯಾಯಯುತವಾಗಿ ಅಭಿವೃದ್ಧಿ ಹೊಂದಬೇಕೆಂದು ಕಿಮ್ಸ್‌ನ ನಿವೃತ್ತ ನಿರ್ದೇಶಕ ಡಾ. ಬಿ.ಎಸ್. ಮದಕಟ್ಟಿ ಹೇಳಿದರು.

ಇಲ್ಲಿನ ಮೋಚಿಗಾರ (ಮೋಚಿ) ಸಮಾಜದ ಪಿ.ಬಿ.ಎಮ್.ಎಸ್.ಇ.ಟಿ. ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಡಾ. ಸುಶೀಲಕುಮಾರ ರೋಣದ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜದ ಪ್ರತಿಯೊಬ್ಬ ವ್ಯಕ್ತಿಯು ಸಾರ್ವತ್ರಿಕವಾಗಿ ಬೆಳೆಯಬೇಕಾದರೆ ಎಲ್ಲ ಸಮುದಾಯದ ಜೊತೆಗೆ ಬೆರೆತು ಬಾಳಬೇಕು. ಪೇ ಬ್ಯಾಕ್ ಟು ಮೋಚಿ ಸೊಸಾಯಿಟಿ'ಸ್ ಎಜುಕೇಶನಲ್ ಟ್ರಸ್ಟ್ ಹುಬ್ಬಳ್ಳಿಯಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ವಿತರಣೆ ಮಾಡುವ ಮೂಲ ಉದ್ದೇಶವೇ ಸಮಾಜದ ಬಡ ಜನಾಂಗದ ಏಳಿಗೆಗಾಗಿ ಆರ್ಥಿಕ ಸಹಾಯ ನೀಡುವುದಾಗಿದೆ ಎಂದರು.

ಶರಣುಕುಮಾರ ಕೋಳೂರು ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿಬೋಧಿಸಿದರು.

ವಿರೇಶ ಬಿಸನಳ್ಳಿ ಸಂವಿಧಾನದ ಪೀಠಿಕೆ ಓದಿಸಿದರು. ಮಹಾದೇವಪ್ಪ ಸ್ವಾಧಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಟ್ರಸ್ಟ್‌ನ ಹುಬ್ಬಳ್ಳಿ ಅಧ್ಯಕ್ಷ ರಮೇಶ ಕೋಳೂರ ಮಾತನಾಡಿದರು. ಡಾ. ಕಿರಣಕುಮಾರ ತೇರಿಕೆರೆ ಸ್ವಾಗತಿಸಿದರೆ, ಫಕೀರಪ್ಪ ಎಸ್.ಬ್ಯಾಹಟ್ಟಿ ಕಾರ್ಯಕ್ರಮ ನಿರೂಪಿಸಿದರು. ರಘು ಎಚ್ ವಂದಿಸಿದರು.

ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಖಜಾಂಚಿ ಸ್ಥಾನಕ್ಕೆ ಗದಗ ಜಿಲ್ಲಾ ಖಜಾಂಚಿ ಸ್ಥಾನಕ್ಕೆ ಆಯ್ಕೆಯಾದ ಮಹಾಂತೇಶ ಎಮ್.ನಿಟ್ಟಾಲಿ, ಅತ್ಯಧಿಕ ಮತಗಳ ಅಂತರದಿಂದ ಗೆಲುವು ಸಾಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ರವಿ ಎಲ್. ಗುಂಜೀಕರ, ಹಾಗೂ ಗದಗ ಜಿಲ್ಲಾ ಸರಕಾರಿ ನೌಕರ ಸಂಘಕ್ಕೆ ನಿರ್ದೇಶಕರಾಗಿ ಆಯ್ಕೆಯಾಗಿರುವ ಡಾ. ಬಸವರಾಜ ಬಳ್ಳಾರಿ ಅವರನ್ನು ಗದಗ ಜಿಲ್ಲಾ ಸರಕಾರಿ ನೌಕರ ಬಾಂಧವರು ಗೌರವಿಸಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ಸರಕಾರಿ ನೌಕರ ಸಂಘದ ಪದಾಧಿಕಾರಿಗಳಾದ ಡಾ. ಬಸವರಾಜ ಬಳ್ಳಾರಿ, ಡಿ.ಎಸ್. ತಳವಾರ, ದುರಗಣ್ಣವರ, ಕರೀಮಸಾಬ ಸುಣಗಾರ, ಗಾಡಗೋಳಿ ಸೇರಿದಂತೆ ಹಲವರಿದ್ದರು.

ಆರೋಗ್ಯಕರ ಮಣ್ಣನ್ನು ಸಂರಕ್ಷಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆ ಗದಗ ಸಹಭಾಗಿತ್ವದಲ್ಲಿ 'ವಿಶ್ವ ಮಣ್ಣು ದಿನಾಚರಣೆ' ಹಾಗೂ ರೈತರೊಂದಿಗೆ ಸಂವಾದ ಕಾರ್ಯಕ್ರಮವನ್ನು ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಉಪ ಕೃಷಿ ನಿರ್ದೇಕಿ ಸ್ಫೂರ್ತಿ ಜಿ.ಎಸ್, ಕೃಷಿಗೆ ಮಣ್ಣು ಅತ್ಯಂತ ಮಹತ್ವಪೂರ್ಣ ನೈಸರ್ಗಿಕ ಸಂಪನ್ಮೂಲವಾಗಿದ್ದು, ಮುಂದಿನ ಪೀಳಿಗೆಗೆ ನಾವು ಆರೋಗ್ಯಕರ ಮಣ್ಣನ್ನೇ ಆಸ್ತಿಯಾಗಿ ಉಳಿಸಬೇಕು. ಮಣ್ಣಿನಲ್ಲಿನ ಸಾವಯವ ಇಂಗಾಲ

ದಿನಂಪ್ರತಿ ಕ್ಷೀಣಿಸುತ್ತಿದ್ದು, ನಾವು ಮಣ್ಣಿಗೆ ಸೇರಿಸುವ ಗೊಬ್ಬರವನ್ನು ಮಣ್ಣಿನ ಪರೀಕ್ಷೆಗೆ ಅನುಗುಣವಾಗಿ ಶಿಫಾರಸ್ಸಿನ ಪ್ರಕಾರ ಸೇರಿಸಬೇಕು ಎಂದರು

ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಎನ್.ಎಚ್. ಭಂಡಿ ಮಾತನಾಡಿ, ವಿಶ್ವ ಮಣ್ಣು ದಿನಾಚರಣೆಯ ಹಿನ್ನೆಲೆ, ಪ್ರಾಮುಖ್ಯತೆ ಹಾಗೂ ಮಣ್ಣಿನ ಆರೋಗ್ಯ ಕಾಪಾಡುವಲ್ಲಿ ಕೈಗೊಳ್ಳಬೇಕಾದ ಕೃಷಿ ಪದ್ಧತಿಗಳ ಕುರಿತು ಚರ್ಚಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥೆ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿ, ರೈತರು ಯಥೇಚ್ಛವಾಗಿ ರಸಗೊಬ್ಬರಗಳನ್ನು ಬಳಸುತ್ತಿದ್ದಾರೆ. ಇದರಿಂದ ಮಣ್ಣಿನ ರಚನೆ ಹಾಗೂ ಆರೋಗ್ಯ ಕೆಡುವುದಲ್ಲದೇ, ದೀರ್ಘಕಾಲೀನವಾಗಿ ಇಳುವರಿಯಲ್ಲಿಯೂ ವ್ಯತ್ಯಾಸವಾಗುತ್ತದೆ.

ಆದ್ದರಿಂದ ಪ್ರತಿ ವರ್ಷ ರೈತರು ಸಾವಯವ ಗೊಬ್ಬರಗಳಾದ ಎರೆಹುಳು ಗೊಬ್ಬರ, ಕೊಟ್ಟಿಗೆ ಗೊಬ್ಬರ ಹಾಗೂ ಹಸಿರೆಲೆ ಗೊಬ್ಬರಗಳನ್ನು ಮಣ್ಣಿಗೆ ಸೇರಿಸಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ರೈತರಿಗೆ ಮಣ್ಣು ಆರೋಗ್ಯ ಪತ್ರಗಳನ್ನು ವಿತರಿಸಲಾಯಿತು. ಹುಲಕೋಟಿಯ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ರಾಜೇಶ್ವರಿ ಚಿನಿವಾರ, ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರದ ಸಿಬ್ಬಂದಿಗಳು ಉಪಸ್ಥಿತರಿದ್ದರು. ಡಾ. ವಿನಾಯಕ ನಿರಂಜನ್ ಸ್ವಾಗತಿಸಿ ನಿರೂಪಿಸಿದರು. ಲಲಿತಾ ಅಸೂಟಿ ವಂದಿಸಿದರು.

ಶ್ರೀ ಬೀರೇಶ್ವರ ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಡಾ. ಜೀವನಸಾಬ ವಾಲೀಕಾರ ಅಭಿಪ್ರಾಯ

ಪರಂಪರೆಯನ್ನು ಹೊಸ ತಲೆಮಾರಿಗೆ ತಲುಪಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗ್ರಾಮೀಣ ಪ್ರದೇಶಗಳಲ್ಲಿಯ ಪ್ರತಿಭೆಗಳನ್ನು ಹುಡುಕಿ ತೆಗೆದು ಅವರಿಗೆ ಉತ್ತಮ ವೇದಿಕೆ ಸೃಷ್ಟಿಸಿ ಅವಕಾಶ ಕ